ಸಂಪುಟ : 11 ಸಂಚಿಕೆ: 94 ಪುಟ : 4+2 ಬೆಲೆ: 3.00 ಗುರುವಾರ ಮೇ 14 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 94 Pages : 4+2 Price : 3.00 Thursday May 14 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮೇ19ರಂದು ಜನಪರ ಯೋಜನೆ ರೂಪಿಸಲು ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

2027–2028ನೇ ಸಾಲಿನ ಜನಪರ ಯೋಜನೆ ರೂಪಿಸುವ ಉದ್ದೇಶದಿಂದ ಕಾರ್ಯತಂತ್ರ ಕುರಿತ ಕಾರ್ಯಾಗಾರವನ್ನು ಮೇ 19ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಅವರನ್ನು ಕಾರ್ಯಾಗಾರದಲ್ಲಿ ಡಿ.ಆರ್. ಪಾಟೀಲ ಅವರ ಉಪಸ್ಥಿತಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಂಬಂಧಿತರು ಭಾಗವಹಿಸಲಿದ್ದಾರೆ.

ಕರ್ನಾಟಕ ರಾಜ್ಯ ವಿಕೇಂದ್ರೀಕರಣ, ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಅವರು ಕಾರ್ಯಾಗಾರಕ್ಕೆ ಮಾರ್ಗದರ್ಶನ ನೀಡಲಿದ್ದಾರೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 2026 ಅಂತ್ಯದವರೆಗಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಮೇ 15ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಬಿ.ಬಿ. ಅಸೂಟಿ ವಹಿಸಲಿದ್ದು, ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಿ.ಬಿ. ಅಸೂಟಿ ಅವರ ನೇತೃತ್ವದಲ್ಲಿ ನಡೆಯಲಿರುವ ಸಭೆಯಲ್ಲಿ ಜಿಲ್ಲೆಯ ವಿವಿಧ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಪ್ರಗತಿ ಕುರಿತು ಸಮಗ್ರ ಪರಿಶೀಲನೆ ನಡೆಯಲಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಧಿಕೃತ ಹೋಂಸ್ಟೇ, ರೆಸಾರ್ಟ್‌ಗಳಿಗೆ ಎಚ್ಚರಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ಅಧಿಕೃತ ಅನುಮೋದನೆ ಪಡೆಯದೇ ಕಾರ್ಯನಿರ್ವಹಿಸುತ್ತಿರುವ ಅನಧಿಕೃತ ಹೋಂಸ್ಟೇಗಳು ಹಾಗೂ ರೆಸಾರ್ಟ್‌ಗಳು ತಮ್ಮ ಚಟುವಟಿಕೆಗಳನ್ನು ತಕ್ಷಣವೇ ಸ್ಥಗಿತಗೊಳಿಸಬೇಕು ಎಂದು ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ.

ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿಗಳು ಪ್ರಕಟಣೆ ಹೊರಡಿಸಿ, ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಹೋಂಸ್ಟೇ ಹಾಗೂ ರೆಸಾರ್ಟ್ ಮಾಲೀಕರು ಅಗತ್ಯ ದಾಖಲೆಗಳೊಂದಿಗೆ ಗದಗ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಿ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ.

ಕಾನೂನುಬದ್ಧ ಅನುಮತಿ ಇಲ್ಲದೇ ಯಾವುದೇ ಪ್ರವಾಸೋದ್ಯಮ ಚಟುವಟಿಕೆ ನಡೆಸಲು ಅವಕಾಶವಿಲ್ಲ. ನಿಯಮ ಉಲ್ಲಂಘಿಸಿ ಕಾರ್ಯನಿರ್ವಹಿಸುವ ಮಾಲೀಕರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

### ಪ್ರಧಾನಿ ಮನವಿಯನ್ನು ಟೀಕಿಸುವುದು ಕಾಂಗ್ರೆಸ್‌ನ ದ್ವಂದ್ವ ನಿಲುವು : ಸಿ.ಸಿ. ಪಾಟೀಲ

# ದೇಶದ ಭದ್ರತೆ ವಿಚಾರದಲ್ಲೂ ರಾಜಕೀಯವೇ?

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಭದ್ರತೆ ಹಾಗೂ ಆರ್ಥಿಕ ಹಿತದೃಷ್ಟಿಯಿಂದ ಪ್ರಧಾನಿ ನರೇಂದ್ರ ಮೋದಿ ಮಾಡಿರುವ ಸಾರ್ವಜನಿಕ ಮನವಿಯನ್ನು ವಿರೋಧ ಪಕ್ಷಗಳು ಆಡಳಿತ ವೈಫಲ್ಯ ಎಂದು ಟೀಕಿಸುತ್ತಿರುವುದು ಖಂಡನೀಯ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಕಿಡಿಕಾರಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಧ್ಯಪ್ರಾಚ್ಯ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದಿಂದ ಭವಿಷ್ಯದಲ್ಲಿ ಉಂಟಾಗಬಹುದಾದ ಆರ್ಥಿಕ ಬಿಕ್ಕಟ್ಟನ್ನು ಮನಗಂಡು, ವಿದೇಶಿ ವಿನಿಮಯ ಭದ್ರವಾಗಿರಲೆಂಬ ಉದ್ದೇಶದಿಂದ ಅನವಶ್ಯಕವಾಗಿ ಚಿನ್ನ ಖರೀದಿಸದಂತೆ ಪ್ರಧಾನಿ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಆದರೆ ಕಾಂಗ್ರೆಸ್ ನಾಯಕರು ಇದನ್ನೇ ರಾಜಕೀಯಕ್ಕೆ ಬಳಸಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರತಿ ಚುನಾವಣೆ ನಂತರ ವಿದೇಶ ಪ್ರವಾಸ ಕೈಗೊಳ್ಳುವ ಹಾಗೂ ಸದನದಲ್ಲಿ ಗಂಭೀರ ಚರ್ಚೆ ನಡೆಸದ ರಾಹುಲ್ ಗಾಂಧಿ ಪ್ರಧಾನಿ ವಿರುದ್ಧ ಟೀಕೆ ಮಾಡುತ್ತಿರುವುದು ಅಚ್ಚರಿಯ ಸಂಗತಿ. ಆಡಳಿತ ಅನುಭವವಿಲ್ಲದ ರಾಹುಲ್ ಗಾಂಧಿ ಟೀಕೆ ಮಾಡುವುದು ಅರ್ಥವಾಗಬಹುದು. ಆದರೆ ಆರ್ಥಿಕ ತಜ್ಞರಾಗಿರುವ ಹಾಗೂ ಹಲವು ಬಾರಿ ಬಜೆಟ್




ಮಂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ವಿಷಯದಲ್ಲಿ ಟೀಕೆ ಮಾಡಿರುವುದು ಸರಿಯಲ್ಲ ಎಂದರು.

1967ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅಡುಗೆ ಅನಿಲ ಹಾಗೂ ತೈಲ ಕೊರತೆಯ ಸಂದರ್ಭ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದರು. ಆಗ ಕಾಂಗ್ರೆಸ್ ನಾಯಕರು ಅದನ್ನು ಬೆಂಬಲಿಸಿದ್ದರು ಎಂಬುದನ್ನು ಮರೆಯಬಾರದು ಎಂದು ಹಳೆಯ ದಿನಪತ್ರಿಕೆ ವರದಿಗಳನ್ನು ಪ್ರದರ್ಶಿಸಿದರು.

ಕಾಂಗ್ರೆಸ್ ನಾಯಕರು ದೇಶದ ಭದ್ರತೆ-ಯ ವಿಚಾರದಲ್ಲಿ ರಾಜಕೀಯ ಮಾಡದೆ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದು

> "ದೇಶದ ಆರ್ಥಿಕ ಭದ್ರತೆಗಾಗಿ ಪ್ರಧಾನಿ ಮಾಡಿದ ಮನವಿಯನ್ನೇ ರಾಜಕೀಯ ಟೀಕೆಗೆ ಬಳಸುವುದು ದುರದೃಷ್ಟಕರ."
> - ಸಿ.ಸಿ. **ಪಾಟೀಲ,** ಶಾಸಕ, ನರಗುಂದ

ಸಲಹೆ ನೀಡಿದರು.

ತಮಿಳುನಾಡಿನ ನಟ ವಿಜಯ ರಾಜಕೀಯ ಪ್ರವೇಶ ಕುರಿತು ಮಾತನಾಡಿದ ಅವರು, "ಚುನಾವಣೆವರೆಗೆ ಚಿತ್ರನಟ ವಿಜಯ, ನಂತರ ಜೋಸೆಫ್ ವಿಜಯ ಆಗುತ್ತಾರೆ" ಎಂದು ವ್ಯಂಗ್ಯವಾಡಿದರು. ಹಿಂದುತ್ವ ವಿರೋಧಿಸಿದ ಹಲವು ಮುಖ್ಯಮಂತ್ರಿಗಳು ಸೋಲು ಕಂಡಿದ್ದಾರೆ. ಹೀಗಾಗಿ ಹಿಂದುಗಳು ಯೋಚಿಸಿ ಮತ ಹಾಕಬೇಕು ಎಂದು ಕರೆ ನೀಡಿದರು.

ಗದಗ-ಬೆಟಗೇರಿ ನಗರಸಭೆ ಸದಸ್ಯರ ಪ್ರಕರಣದ ಕುರಿತು ಪ್ರತಿಕ್ರಿಯಿಸಿದ ಅವರು, ಪ್ರಾದೇಶಿಕ ಆಯುಕ್ತರು ತರಾತುರಿಯಲ್ಲಿ ಕ್ರಮ ಕೈಗೊಂಡಿದ್ದರು.

### "ಮೊದಲು ಗದಗಕ್ಕೆ ನೀರು ಕೊಟ್ಟರೆ ಸಾಕು"

ಪ್ರಧಾನಿ ನರೇಂದ್ರ ಮೋದಿ ಅವರು ಇಂಧನ ಮಿತಬಳಕೆ ಕುರಿತು ನೀಡಿದ ಸಲಹೆಯನ್ನು ಬಿಜೆಪಿ ಎಷ್ಟರ ಮಟ್ಟಿಗೆ ಪಾಲಿಸುತ್ತಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಶಾಸಕ ಸಿ.ಸಿ. ಪಾಟೀಲ, "ನಮ್ಮ ಮನೆಯಲ್ಲಿ ಎರಡು-ಮೂರು ಕಾರುಗಳಿವೆ. ಆದರೆ ಸದ್ಯ ಒಂದನ್ನೇ ಬಳಕೆ ಮಾಡುತ್ತಿದ್ದೇವೆ. ಬೆಂಗಳೂರಿಗೆ ಹೋದಾಗ ಮೆಟ್ರೋ ಪ್ರಯಾಣ ಮಾಡುತ್ತೇನೆ" ಎಂದರು.

ಈ ವೇಳೆ "ಹಾಗಿದ್ದರೆ ಗದಗದಲ್ಲೂ ಮೆಟ್ರೋ ಯೋಜನೆ ಜಾರಿಗೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡುತ್ತೀರಾ?" ಎಂಬ ಮಾಧ್ಯಮದವರ ಪ್ರಶ್ನೆಗೆ, "ಮೊದಲು ಅವರು (ಎಚ್.ಕೆ. ಪಾಟೀಲ) ಗದಗ-ಬೆಟಗೇರಿಗೆ ನೀರು ಕೊಟ್ಟರೆ ಸಾಕು" ಎಂದು ವ್ಯಂಗ್ಯವಾಡಿದರು.

▶▶ 3ನೇ ಪುಟಕ್ಕೆ

### ಆರ್‌ಟಿಇ ಸೊಸೈಟಿಯಿಂದ ಗುಣಮಟ್ಟದ ವಿಜ್ಞಾನ-ತಾಂತ್ರಿಕ ಶಿಕ್ಷಣಕ್ಕೆ ಒತ್ತು-ಬಿಸಿಎ ಕೋರ್ಸ್‌ಗೂ ಚಾಲನೆ

# ಹುಲಕೋಟಿಯಲ್ಲಿ 'ಸ್ಫೂರ್ತಿ' ಪದವಿ ಪೂರ್ವ ಕಾಲೇಜ್ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿಯ ರೂರಲ್ ಟೆಕ್ನಿಕಲ್ ಎಜ್ಯುಕೇಶನ್ ಸೊಸೈಟಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದ 'ಸ್ಫೂರ್ತಿ' ಸ್ವತಂತ್ರ ಪದವಿ ಪೂರ್ವ ಕಾಲೇಜನ್ನು ಆರಂಭಿಸುತ್ತಿದೆ ಎಂದು ಸೊಸೈಟಿ ಕಾರ್ಯಾಧ್ಯಕ್ಷ ಸಚಿನ್ ಪಾಟೀಲ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಹಾಗೂ ನಗರ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಮತ್ತು ವಿಜ್ಞಾನ ಶಿಕ್ಷಣ ನೀಡುವ ಉದ್ದೇಶದಿಂದ ಕಾಲೇಜು ಆರಂಭಿಸಲಾಗುತ್ತಿದೆ ಎಂದರು.

ನೂತನ ಕಾಲೇಜಿನಲ್ಲಿ ಪಿಸಿಎಂಬಿ, ಪಿಸಿಎಂಇ ಹಾಗೂ ಪಿಸಿಎಂಎಸ್ ಸೇರಿ ಮೂರು ವಿಭಾಗಗಳಲ್ಲಿ ಪ್ರವೇಶಾತಿ ನೀಡಲಾಗುತ್ತಿದ್ದು, ಪ್ರತಿ ವಿಭಾಗಕ್ಕೆ ತಲಾ 80 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗಾಗಿ ಡಿಜಿಟಲ್ ಗ್ರಂಥಾಲಯ, ಸಿಇಟಿ, ನೀಟ್ ಹಾಗೂ ಜೆಇಇ ಪರೀಕ್ಷೆಗಳಿಗೆ ವಿಶೇಷ ತರಬೇತಿ ವ್ಯವಸ್ಥೆ




ಮಾಡಲಾಗಿದೆ. ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕ ವಸತಿ ನಿಲಯಗಳ ವ್ಯವಸ್ಥೆಯೂ ಇದೆ ಎಂದು ತಿಳಿಸಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೊಸೈಟಿ ವತಿಯಿಂದ ವಿದ್ಯಾರ್ಥಿವೇತನ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೂರಲ್ ಎಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ವಿ.ಎಂ. ಪಾಟೀಲ, ಪಿಯು ಕಾಲೇಜಿನೊಂದಿಗೆ ಈ ವರ್ಷದಿಂದ ಬಿಸಿಎ (ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್) ಪದವಿ ಕೋರ್ಸ್‌ಗೂ ಚಾಲನೆ ನೀಡಲಾಗುತ್ತಿದೆ ಎಂದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಮಾನ್ಯತೆಯೊಂದಿಗೆ ಆರಂಭವಾಗುತ್ತಿರುವ ಬಿಸಿಎ ಕೋರ್ಸ್‌ಗೆ ಮೊದಲ ಹಂತದಲ್ಲಿ 60 ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ.

> "ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೂ ನಗರ ಮಟ್ಟದ ಗುಣಮಟ್ಟದ ವಿಜ್ಞಾನ ಮತ್ತು ತಾಂತ್ರಿಕ ಶಿಕ್ಷಣ ದೊರೆಯಬೇಕು ಎಂಬ ಉದ್ದೇಶದಿಂದ ಸ್ಫೂರ್ತಿ ಕಾಲೇಜ್ ಆರಂಭಿಸಲಾಗಿದೆ."
> – **ಸಚಿನ್ ಪಾಟೀಲ,** ಕಾರ್ಯಾಧ್ಯಕ್ಷರು, ಆರ್‌ಟಿಇ ಸೊಸೈಟಿ

ಈಗಾಗಲೇ ಎಂಜಿನಿಯರಿಂಗ್ ಕಾಲೇಜಿನಲ್ಲಿ ಸುಸಜ್ಜಿತ ಪ್ರಯೋಗಾಲಯಗಳು ಹಾಗೂ ಅನುಭವಿ ಉಪನ್ಯಾಸಕರಿರುವುದರಿಂದ ವಿದ್ಯಾರ್ಥಿಗಳಿಗೆ ಉನ್ನತ ಮಟ್ಟದ ಪ್ರಾಯೋಗಿಕ ಶಿಕ್ಷಣ ದೊರೆಯಲಿದೆ ಎಂದು ಹೇಳಿದರು.

ವಿಜ್ಞಾನ ಅಥವಾ ವಾಣಿಜ್ಯ ವಿಭಾಗದಲ್ಲಿ ದ್ವಿತೀಯ ಪಿಯುಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ಈ ಪದವಿಗೆ ಪ್ರವೇಶ ಪಡೆಯಬಹುದಾಗಿದ್ದು, ಉತ್ತಮ ಉದ್ಯೋಗಾವಕಾಶ ಕಲ್ಪಿಸುವುದು ಸಂಸ್ಥೆಯ ಗುರಿಯಾಗಿದೆ ಎಂದರು.

# ಗದಗ ನಗರಸಭೆ ಕೇಸ್‌ಗೆ ಸುಪ್ರೀಂ ಬ್ರೇಕ್ ಬಿಜೆಪಿ ಸದಸ್ಯರಿಗೆ ತಾತ್ಕಾಲಿಕ ರಿಲೀಫ್!

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ಮೂವರು ಸದಸ್ಯರ ಅನರ್ಹತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಹತ್ವದ ತಾತ್ಕಾಲಿಕ ತಡೆಯಾಜ್ಞೆ ನೀಡಿದೆ.

ಈ ಮೂಲಕ ಬೆಳಗಾವಿ ಪ್ರಾದೇಶಿಕ ಆಯುಕ್ತರು ನಡೆಸಬೇಕಿದ್ದ ಮುಂದಿನ ವಿಚಾರಣಾ ಪ್ರಕ್ರಿಯೆಗೆ ತಾತ್ಕಾಲಿಕ ಬ್ರೇಕ್ ಬಿದ್ದಂತಾಗಿದೆ.

ನಗರಸಭೆ ಸದಸ್ಯರಾದ ಉಷಾ ಮಹೇಶ್ ದಾಸರ, ಅನಿಲ್ ಅಬ್ಬಿಗೇರಿ ಹಾಗೂ ಗುಳಪ್ಪ ಮುಶಿಗೇರಿ ಅವರ ಸದಸ್ಯತ್ವ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿ ಹಿನ್ನೆಲೆಯಲ್ಲಿ ಹೈಕೋರ್ಟ್ ಏಕಸದಸ್ಯ ಪೀಠ ನೀಡಿದ್ದ ಆದೇಶಕ್ಕೆ ದ್ವಿಸದಸ್ಯ ಪೀಠ ತಡೆ ನೀಡಿತ್ತು. ನಂತರ ಪ್ರಾದೇಶಿಕ ಆಯುಕ್ತರು ಮರು ವಿಚಾರಣೆ ನಡೆಸುವಂತೆ ಸೂಚನೆ ನೀಡಲಾಗಿತ್ತು.

ಈ ಹಿನ್ನೆಲೆಯಲ್ಲಿ ಪ್ರಾದೇಶಿಕ ಆಯುಕ್ತರು ನೋಟಿಸ್ ಜಾರಿ ಮಾಡಿ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದರು. ಈ ನೋಟಿಸ್




ಪ್ರಶ್ನಿಸಿ ಮೂವರು ಸದಸ್ಯರು ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಅನುಮತಿ ಅರ್ಜಿ ಸಲ್ಲಿಸಿದ್ದರು.

ಬುಧವಾರ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್, ಸಂದೀಪ್ ಮೆಹ್ತಾ ಹಾಗೂ ವಿಜಯ್ ಬಿಷ್ಣೋಯಿ ಅವರ ಪೀಠ, ಹೈಕೋರ್ಟ್ ದ್ವಿಸದಸ್ಯ ಪೀಠದ ಆದೇಶ ಸೇರಿದಂತೆ ಎಲ್ಲಾ ಮುಂದಿನ ಪ್ರಕ್ರಿಯೆಗಳಿಗೆ ತಾತ್ಕಾಲಿಕ ತಡೆಯಾಜ್ಞೆ ನೀಡಿದೆ.

ಈ ಬೆಳವಣಿಗೆಯಿಂದ ಬಿಜೆಪಿ ಸದಸ್ಯರಿಗೆ ತಾತ್ಕಾಲಿಕವಾಗಿ ಕಾನೂನು ಹೋರಾಟದಲ್ಲಿ ಸಮಾಧಾನ ಸಿಕ್ಕಂತಾಗಿದೆ. ಸದ್ಯಕ್ಕೆ ಮೂವರು ಸದಸ್ಯರು ತಮ್ಮ ಸ್ಥಾನದಲ್ಲಿ ಮುಂದುವರಿಯಲಿದ್ದಾರೆ ಎಂದು ತಿಳಿದುಬಂದಿದೆ.

ಅಲ್ಲದೆ, ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿವಾದಿಗಳಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದ್ದು, ಮುಂದಿನ ವಿಚಾರಣೆ ನಾಲ್ಕು ವಾರಗಳ ಬಳಿಕ ನಡೆಯುವ ಸಾಧ್ಯತೆ ಇದೆ.

### ಜನಪರ ಬೇಡಿಕೆಗಳ ಈಡೇರಿಕೆಗೆ ಮೇ 25ರಂದು ಜನ ಕಲ್ಯಾಣ ಯಾತ್ರೆ

# ಮುಂಡರಗಿ ಅಭಿವೃದ್ಧಿಗೆ ಜನ ಕಲ್ಯಾಣ ಯಾತ್ರೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿವಿಧ ಜನಪರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮೇ 25ರಂದು ವಾರಣಾಸಿಯ ಡಿಸಿ ಕಚೇರಿ ಎದುರು ಅಸಹಕಾರ ಚಳುವಳಿ, ಜನ ಕಲ್ಯಾಣ ಯಾತ್ರೆ ಹಾಗೂ 'ಬೆಂಗಳೂರು ಚಲೋ' ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮುಂಡರಗಿ ತಾಲೂಕು ಸಾರ್ವಜನಿಕ ಹೋರಾಟ ವೇದಿಕೆ ಸಂಚಾಲಕ ಬಸವರಾಜ ನವಲಗುಂದ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಡರಗಿ ಭಾಗದ ಬಹುಕಾಲದ ಬೇಡಿಕೆಗಳ ಕುರಿತು ಸರ್ಕಾರ ಹಾಗೂ ಜನಪ್ರತಿನಿಧಿಗಳ ಗಮನ ಸೆಳೆಯಲು ಹಲವು ಹಂತದ ಹೋರಾಟ ನಡೆಸಿದರೂ ಸಮರ್ಪಕ ಸ್ಪಂದನೆ ದೊರೆತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗದಗ-ಹರಪನಹಳ್ಳಿ ರೈಲ್ವೆ ಮಾರ್ಗ, ರಾಷ್ಟ್ರೀಯ ಹೆದ್ದಾರಿ ಕಾಮಗಾರಿ, ಸರ್ಕಾರಿ ಸೌಲಭ್ಯಗಳ




ವಿಸ್ತರಣೆ ಸೇರಿದಂತೆ ಅನೇಕ ಅಭಿವೃದ್ಧಿ ವಿಚಾರಗಳಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು.

ಮುಂಡರಗಿ ತಾಲೂಕು ಸಾರ್ವಜನಿಕ ಹೋರಾಟ ವೇದಿಕೆ, ಗದಗ-ಹರಪನಹಳ್ಳಿ ರೈಲ್ವೆ ಮಾರ್ಗ ರಚನೆಯ ಜಂಟಿ ಕ್ರಿಯಾ ಸಮಿತಿ ಹಾಗೂ ಅದ್ವಿಕ್ ವಿವಿಧೋದ್ದೇಶಗಳ ಅಭಿವೃದ್ಧಿ ಸಂಘ ಮುಂಡರಗಿ ಸಂಯುಕ್ತಾಶ್ರಯದಲ್ಲಿ ಈ ಪ್ರತಿಭಟನೆ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಗದಗ-ಹರಪನಹಳ್ಳಿ ರೈಲ್ವೆ ಮಾರ್ಗ ನಿರ್ಮಾಣಕ್ಕಾಗಿ ಈ ಹಿಂದೆ ಅಂದಿನ ಸಂಸದ ಶಿವಕುಮಾರ ಉದಾಸಿ ಅವರ ಕಚೇರಿ ಎದುರು ಧರಣಿ ನಡೆಸಲಾಗಿತ್ತು. ಬಳಿಕ ಕೇಂದ್ರ ಸರ್ಕಾರ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಕೇಂದ್ರ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿತ್ತು. ದೆಹಲಿಯ ಜಂತರ್-ಮಂತರ್‌ನಲ್ಲಿ ಹೋರಾಟ ಆರಂಭಿಸಿದ ಬಳಿಕ ಮಾತ್ರ ಮರುಸರ್ವೆಗೆ □9 ಲಕ್ಷ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು.

ಮುಂಡರಗಿಯಲ್ಲಿ ಅಂಚೆ ಕಚೇರಿ ಕಟ್ಟಡ ನಿರ್ಮಾಣ, ಬಡವರಿಗೆ 1008 ನಿವೇಶನಗಳ ಹಕ್ಕುಪತ್ರ ವಿತರಣೆ, ಸರ್ಕಾರಿ ಪ್ರೌಢಶಾಲೆಗಳಿಗೆ ಮೂಲಸೌಕರ್ಯ, ಪ್ರತ್ಯೇಕ ವಿಧಾನಸಭಾ ಕ್ಷೇತ್ರ ಘೋಷಣೆ, ಕಾನೂನು ಮಹಾವಿದ್ಯಾಲಯ ಸ್ಥಾಪನೆ, ಬಗರಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರ ಹಾಗೂ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸುವಂತೆ ಒತ್ತಾಯಿಸಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ವಿಶ್ವನಾಥ ಖಾನಾಪುರ, ಫಕ್ಕಿರಪ್ಪ ಹೆಬಸೂರ, ಬರಕತಅಲಿ ಮುಲ್ಲಾ, ಮಾಂತೇಶ್ ನೆಲೂಡಿ, ರವಿಗೌಡ ಪಾಟೀಲ ಹಾಗೂ ಬಸಪ್ಪ ವಡ್ಡರ ಉಪಸ್ಥಿತರಿದ್ದರು.

### ಹೆದ್ದಾರಿ ಕಾಮಗಾರಿ ವಿಳಂಬಕ್ಕೆ ಆಕ್ರೋಶ

2017ರಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಕೊಪ್ಪಳ-ಮುಂಡರಗಿ-ಶಿಗ್ಗಾವಿ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದ್ದರು. ಆದರೆ ಹಲವು ವರ್ಷಗಳು ಕಳೆದರೂ ಕಾಮಗಾರಿ ಪೂರ್ಣಗೊಂಡಿಲ್ಲ ಎಂದು ಹೋರಾಟಗಾರರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಅವರು ಕಾಮಗಾರಿ ಪೂರ್ಣಗೊಳಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

> "ಮುಂಡರಗಿ ಭಾಗದ ಅಭಿವೃದ್ಧಿ ಬೇಡಿಕೆಗಳ ಕುರಿತು ಹಲವು ಬಾರಿ ಮನವಿ ಸಲ್ಲಿಸಿದರೂ ಸರ್ಕಾರ ಸ್ಪಂದಿಸಿಲ್ಲ. ಹೀಗಾಗಿ ಜನಪರ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುತ್ತಿದೆ."
> – **ಬಸವರಾಜ ನವಲಗುಂದ,** ಸಂಚಾಲಕರು, ಮುಂಡರಗಿ ತಾಲೂಕು ಸಾರ್ವಜನಿಕ ಹೋರಾಟ ವೇದಿಕೆ

# ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಹೊಳೆ-ಆಲೂರಿನಲ್ಲಿ 2026-27ನೇ ಸಾಲಿನ ಡಿಪ್ಲೊಮಾ ಪ್ರಥಮ ವರ್ಷದ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದ್ದು, ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶ ಪ್ರಕ್ರಿಯೆ ಮೊದಲ ಹಂತವಾಗಿ ಎಪ್ರಿಲ್ 21ರಿಂದ ಮೇ 2ರವರೆಗೆ, ದ್ವಿತೀಯ ಹಂತ ಮೇ 6ರಿಂದ 9ರವರೆಗೆ, ತೃತೀಯ ಹಂತ ಮೇ 11ರಿಂದ 13ರವರೆಗೆ ಹಾಗೂ ನಾಲ್ಕನೇ ಹಂತ ಮೇ 14ರಿಂದ 18ರವರೆಗೆ ನಡೆಯಲಿದೆ. ನಂತರ ಸಂಸ್ಥೆಯ ಹಂತದಲ್ಲಿಯೂ ಪ್ರವೇಶ ಪ್ರಕ್ರಿಯೆ ಮುಂದುವರಿಯಲಿದೆ.

ಸಂಸ್ಥೆಯಲ್ಲಿ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಇಂಜಿನಿಯರಿಂಗ್ ಹಾಗೂ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸ್‌ಗಳು ಲಭ್ಯವಿವೆ.

ಆಫ್‌ಲೈನ್ ಮೂಲಕ ಅರ್ಜಿ ಸ್ವೀಕರಿಸಲಾಗುತ್ತಿದ್ದು, ಮೆರಿಟ್ ಹಾಗೂ ಮೀಸಲಾತಿ ನಿಯಮಾವಳಿಗಳ ಅನ್ವಯ ಪ್ರಾಚಾರ್ಯರ ಹಂತದಲ್ಲಿಯೇ ಪ್ರವೇಶ ಪ್ರಕ್ರಿಯೆ ನಡೆಸಲಾಗುವುದು.

ಅರ್ಹ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವಂತೆ ಕಾಲೇಜು ಪ್ರಕಟಣೆಯಲ್ಲಿ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ 8317433922 ಹಾಗೂ 9448183626 ಸಂಖ್ಯೆಗೆ ಸಂಪರ್ಕಿಸಬಹುದು.

**ಇತಿಹಾಸ, ಸಾಹಿತ್ಯ, ಸಂಗೀತ, ಶಿಲ್ಪಕಲೆ, ಭಾವೈಕ್ಯತೆಯ ಸಾಂಸ್ಕೃತಿಕ ವೈಭವ ಅನಾವರಣಗೊಳಿಸಿದ ಅಪೂರ್ವ ಕೃತಿ**

# ‘ಗದಗ ಜಿಲ್ಲೆಯ ಸಾಂಸ್ಕೃತಿಕ ಕೊಡುಗೆಗಳು’




ಗದಗ ಎಂದರೆ ಕನ್ನಡದ ಸಾಂಸ್ಕೃತಿಕ ಸಿರಿವಂತಿಕೆಯ ಪ್ರತೀಕ. ಇತಿಹಾಸ, ಸಾಹಿತ್ಯ, ಸಂಗೀತ, ಶಿಲ್ಪಕಲೆ, ಭಾವೈಕ್ಯತೆ, ಮುದ್ರಣ ಸಂಸ್ಕೃತಿ, ಸಹಕಾರ ಚಳುವಳಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ರಾಜ್ಯಕ್ಕೆ ವಿಶಿಷ್ಟ ಕೊಡುಗೆ ನೀಡಿದ ನೆಲ ಗದಗ. ಇಂತಹ ಗದಗ ಜಿಲ್ಲೆಯ ಸಮಗ್ರ ಸಾಂಸ್ಕೃತಿಕ ಹಿರಿಮೆಯನ್ನು ದಾಖಲಿಸುವ ಕಾರ್ಯವನ್ನು ಪ್ರೊ. ಶಕುಂತಲಾ ಸಿಂಧೂರ ಅವರು ತಮ್ಮ "ಗದಗ ಜಿಲ್ಲೆಯ ಸಾಂಸ್ಕೃತಿಕ ಕೊಡುಗೆಗಳು" ಕೃತಿಯ ಮೂಲಕ ಅತ್ಯಂತ ಅರ್ಥಪೂರ್ಣವಾಗಿ ಮಾಡಿದ್ದಾರೆ.

ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆ ಹಾಗೂ ಜಗದ್ಗುರು ತೋಂಟದಾರ್ಯ ಮಠ ವತಿಯಿಂದ ಪ್ರಕಟಗೊಂಡಿರುವ ಈ ಕೃತಿ ಗದಗ ಜಿಲ್ಲೆಯ ಸಾಂಸ್ಕೃತಿಕ ಇತಿಹಾಸವನ್ನು ಸಂಶೋಧನಾತ್ಮಕ ದೃಷ್ಟಿಕೋನದಿಂದ ಪರಿಚಯಿಸುವ ಮಹತ್ವದ ಗ್ರಂಥವಾಗಿದೆ.

ಗದಗ ಜಿಲ್ಲೆಯ ಬಗ್ಗೆ ಮಾತನಾಡುವಾಗ ಮೈ ರೋಮಾಂಚನವಾಗುತ್ತದೆ ಎಂಬ ಮಾತು ಅತಿಶಯೋಕ್ತಿಯಲ್ಲ. ಆದಿಕವಿ ಪಂಪನ ತಾಯಿಯ ತವರೂರು ಅಣ್ಣಿಗೇರಿ, ದಾನಚಿಂತಾಮಣಿ ಅತ್ತಿಮಬ್ಬೆಯ ಕಾರ್ಯಕ್ಷೇತ್ರ ಲಕ್ಕುಂಡಿ, ಕರ್ನಾಟಕ ಭಾರತ ಕಥಾಮಂಜರಿಯ ರೂಪಕ ಚಕ್ರವರ್ತಿ ಗದುಗಿನ ಕೋಳಿವಾಡದ ನಾರಾಯಣಪ್ಪ, ಭಾವೈಕ್ಯತೆಯ ತವನಿಧಿ ಜಗದ್ಗುರು ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು, ಶಿರಹಟ್ಟಿಯ ಫಕೀರೇಶ್ವರ ಮಠ, ಮುಳಗುಂದದ ಬಾಲಲೀಲಾ ಮಹಾಂತ ಶಿವಯೋಗಿಗಳು, ಅನಾಥರ ಬದುಕಿಗೆ ಬೆಳಕಾದ ಗಾನಯೋಗಿ ಪಂಚಾಕ್ಷರಿ ಗವಾಯಿಗಳು ಹಾಗೂ ಪಂಡಿತ ಪುಟ್ಟರಾಜ ಗವಾಯಿಗಳಂತಹ ಮಹನೀಯರ ನೆನಪು ಗದಗ ನೆಲದ ಮಹತ್ವವನ್ನು ಇನ್ನಷ್ಟು ಹೆಚ್ಚಿಸುತ್ತದೆ.

ಅಂಕಲಿಪಿಯಿಂದ ಹಿಡಿದು ಬೃಹತ್ ಗ್ರಂಥಗಳವರೆಗೆ ಮುದ್ರಣ ಸಂಸ್ಕೃತಿಯ ಕಾಶಿಯಾಗಿ ಖ್ಯಾತಿ ಪಡೆದಿರುವ ಗದಗ ಜಿಲ್ಲೆ, ಸಹಕಾರ ಕ್ಷೇತ್ರಕ್ಕೂ ಮಹತ್ವದ ಕೊಡುಗೆ ನೀಡಿರುವುದು ವಿಶೇಷ. ಇಂತಹ ಸಾಂಸ್ಕೃತಿಕ ಮತ್ತು ಸಾಮಾಜಿಕ ಪರಂಪರೆಯನ್ನು ಕೃತಿ ಸಮಗ್ರವಾಗಿ ದಾಖಲಿಸಿದೆ.

ಕೃತಿಯಲ್ಲಿ ಒಟ್ಟು ಆರು ಅಧ್ಯಾಯಗಳಿದ್ದು, ಪ್ರತಿಯೊಂದು ಅಧ್ಯಾಯದಲ್ಲಿಯೂ ಗದಗ ಜಿಲ್ಲೆಯ ಐತಿಹಾಸಿಕ, ಚಾರಿತ್ರಿಕ ಹಾಗೂ ಸಾಂಸ್ಕೃತಿಕ ವೈಶಿಷ್ಟ್ಯಗಳನ್ನು ಸುಲಭವಾಗಿ ಅರ್ಥವಾಗುವ ರೀತಿಯಲ್ಲಿ ವಿಶ್ಲೇಷಿಸಲಾಗಿದೆ. ಜಿಲ್ಲೆಯ ಶಾಸನಗಳು, ವಾಸ್ತುಶಿಲ್ಪ ಕಲೆ, ಧಾರ್ಮಿಕ ಪರಂಪರೆ, ಕೋಟೆ-ಕೊತ್ತಲಗಳು, ಕೆರೆಗಳು ಹಾಗೂ ಕೃಷಿ ಜೀವನದ ಚಿತ್ರಣವನ್ನು ಮನೋಜ್ಞವಾಗಿ ನಿರೂಪಿಸಲಾಗಿದೆ.


ಗದಗ ಜಿಲ್ಲೆಯ ಕವಿಗಳು, ರಂಗಭೂಮಿ ಕಲಾವಿದರು, ಸಂಗೀತ ಪರಂಪರೆ ಹಾಗೂ ಗದುಗಿನ ತೋಂಟದಾರ್ಯ ಮಠದ ಭಾವೈಕ್ಯತೆಯ ಸಂದೇಶವನ್ನು ಕೃತಿ ವಿಶೇಷವಾಗಿ ಗುರುತಿಸಿದೆ. ಜಿಲ್ಲೆಯ ಎಲ್ಲ ತಾಲೂಕುಗಳ ವೈಶಿಷ್ಟ್ಯ, ದೇವಾಲಯಗಳು, ಬಸದಿಗಳು ಹಾಗೂ ಭಾವೈಕ್ಯತೆಯ ಕೇಂದ್ರಗಳ ಕುರಿತ ಮಾಹಿತಿಯೂ ಕೃತಿಯಲ್ಲಿ ಅಡಕವಾಗಿದೆ.

"ಗದಗ ಕೇವಲ ಒಂದು ಊರಲ್ಲ, ಅದು ಕನ್ನಡ ನಾಡಿನ ಸಾಂಸ್ಕೃತಿಕ ಜೀವಚೈತನ್ಯದ ಶಕ್ತಿ ಪೀಠ" ಎಂಬ ಅಭಿಪ್ರಾಯವನ್ನು ಕೃತಿಕಾರರು ಅತ್ಯಂತ ಸಮರ್ಥವಾಗಿ ಪ್ರತಿಪಾದಿಸಿದ್ದಾರೆ. ಇಲ್ಲಿನ ಜನಜೀವನ, ರಾಜಮನೆತನಗಳ ಆಡಳಿತ, ರಂಗಭೂಮಿ, ಸಂಗೀತ, ಶಿಲ್ಪಕಲಾ ವೈಭವ, ಚಿತ್ರಕಲೆ, ಪತ್ರಿಕೋದ್ಯಮ ಹಾಗೂ ಮುದ್ರಣ ಸಂಸ್ಕೃತಿಯ ಶ್ರೀಮಂತಿಕೆ ಇಡೀ ನಾಡಿಗೆ ಮಾದರಿಯಾಗಿದೆ ಎಂಬುದನ್ನು ಕೃತಿ ಮನದಟ್ಟು ಮಾಡುತ್ತದೆ.

ಗದಗ ಜಿಲ್ಲೆಯ ಪ್ರಾಕೃತಿಕ ಸಂಪತ್ತಿನ ಕುರಿತೂ ಕೃತಿಯಲ್ಲಿ ವಿಶೇಷ ಉಲ್ಲೇಖವಿದೆ. ಕಪ್ಪತ್ತಗುಡ್ಡದ ಅರಣ್ಯ ಸಂಪತ್ತು, ಅಲ್ಲಿ ದೊರಕುವ ಔಷಧೀಯ ಸಸ್ಯಗಳು, ಚಿನ್ನದ ನಿಕ್ಷೇಪಗಳು ಹಾಗೂ ಆಧುನಿಕ ಪವನ ವಿದ್ಯುತ್ ಉತ್ಪಾದನೆ ಕುರಿತು ಸಮಗ್ರ ಮಾಹಿತಿ ನೀಡಲಾಗಿದೆ.

ದೇಶದ ಸ್ವಾತಂತ್ರ್ಯ ಹೋರಾಟ ಹಾಗೂ ಏಕೀಕರಣ ಚಳುವಳಿಯಲ್ಲಿ ಗದಗ ಜಿಲ್ಲೆಯ ಪಾತ್ರವನ್ನು ಸಹ ಕೃತಿ ದಾಖಲಿಸಿದ್ದು, ಜಿಲ್ಲೆಯ ಹೋರಾಟದ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ಮಾಡಿದೆ.

ಪ್ರೊ. ಶಕುಂತಲಾ ಸಿಂಧೂರ ಅವರ ಈ ಸಂಶೋಧನಾತ್ಮಕ ಕೃತಿ ಮುಂದಿನ ಅಧ್ಯಯನಕಾರರಿಗೆ ಆಕರ ಗ್ರಂಥವಾಗಲಿದ್ದು, ಗದಗ ಜಿಲ್ಲೆಯ ಸಾಂಸ್ಕೃತಿಕ ವೈಭವವನ್ನು ಅರಿಯ ಬಯಸುವ ಪ್ರತಿಯೊಬ್ಬರಿಗೂ ಸಂಗ್ರಹಯೋಗ್ಯ ಕೃತಿಯಾಗಿದೆ. ನಾಡಿನ ಜನತೆ ಈ ಕೃತಿಯನ್ನು ಆದರದಿಂದ ಸ್ವೀಕರಿಸಿ ಸಂಶೋಧಕಿಯನ್ನು ಪ್ರೋತ್ಸಾಹಿಸಬೇಕಾಗಿದೆ.



**- ಡಾ. ನಿಷ್ಠಿ ರುದ್ರಪ್ಪ,**
ಅಧ್ಯಕ್ಷರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಅಖಂಡ ಬಳ್ಳಾರಿ ಜಿಲ್ಲೆ

**‘ಸಖಿ ಸೂಸಿದ ಸೌಗಂಧ’ ಕವನ ಸಂಕಲನಕ್ಕೆ ಫ್ರಾನ್ಸಿಸ್ ದಾಂತಿ ಸ್ಮಾರಕ ಪುರಸ್ಕಾರ**

# ನಿರಂತರ ಪ್ರಕಾಶನಕ್ಕೆ ಮತ್ತೊಂದು ಹೆಮ್ಮೆಯ ಗರಿ

■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಷರ ಸಂಸ್ಕೃತಿಯನ್ನು ಉಳಿಸಿ ಪುಸ್ತಕ ಸಂಸ್ಕೃತಿಯನ್ನು ಬೆಳೆಸುವ ಕಾರ್ಯದಲ್ಲಿ ತೊಡಗಿರುವ ಸ್ಥಳೀಯ ನಿರಂತರ ಪ್ರಕಾಶನ ಸಂಸ್ಥೆಗೆ ಮತ್ತೊಂದು ಹೆಮ್ಮೆಯ ಗರಿ ಲಭಿಸಿದೆ.




ಕಳೆದ 22 ವರ್ಷಗಳಿಂದ ಯುವ ಹಾಗೂ ಅವಕಾಶ ವಂಚಿತ ಬರಹಗಾರರ ಕೃತಿಗಳನ್ನು ಪ್ರಕಟಿಸುತ್ತಾ ಬಂದಿರುವ ನಿರಂತರ ಪ್ರಕಾಶನ, ಎಲೆಮರೆಯ ಕಾಯಿಯಂತಿರುವ ಹಲವಾರು ಸಾಹಿತಿಗಳ ಚೊಚ್ಚಲ ಕೃತಿಗಳನ್ನು ಪ್ರಕಟಿಸಿ ಸಾಹಿತ್ಯ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದೆ.

2025ನೇ ಸಾಲಿನಲ್ಲಿ ಪ್ರಥಮ ಆವೃತ್ತಿಯಾಗಿ ಪ್ರಕಟಗೊಂಡ ಉಡುಪಿ ಜಿಲ್ಲೆಯ ಪುತ್ತೂರಿನ ಶಿಕ್ಷಕಿ, ಅನುವಾದಕಿ ಹಾಗೂ ಕವಯತ್ರಿ ಫ್ಲಾವಿಯಾ ಅಲ್ಬುಕರ್ಕ್ ಅವರ ‘ಸಖಿ ಸೂಸಿದ ಸೌಗಂಧ’ ಕವನ ಸಂಕಲನಕ್ಕೆ ದಿ. ಫ್ರಾನ್ಸಿಸ್ ದಾಂತಿ ಸ್ಮಾರಕ ಪ್ರತಿಷ್ಠಾನದ ಪ್ರತಿಷ್ಠಿತ ಪುರಸ್ಕಾರ ಲಭಿಸಿದೆ.

ಪ್ರಶಸ್ತಿಯು ₹25 ಸಾವಿರ ನಗದು ಹಾಗೂ ಸ್ಮರಣಿಕೆಯನ್ನು ಒಳಗೊಂಡಿದ್ದು, ಜೂನ್ ತಿಂಗಳ ಎರಡನೇ ವಾರದಲ್ಲಿ ನಡೆಯಲಿರುವ ಕರ್ನಾಟಕ ರಾಜ್ಯ ಮಟ್ಟದ ವಾರ್ಷಿಕ ಮಹಾಸಭೆಯಲ್ಲಿ ಪ್ರದಾನ ಮಾಡಲಾಗುತ್ತದೆ. ಈ ಕಾರ್ಯಕ್ರಮವನ್ನು ದಿ. ಫ್ರಾನ್ಸಿಸ್ ದಾಂತಿ ಸ್ಮಾರಕ ಪ್ರತಿಷ್ಠಾನ ಹಾಗೂ ಕೆಥೋಲಿಕ್ ಸಭಾ ಉಡುಪಿ ಪ್ರದೇಶದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದೆ ಎಂದು ಕಾರ್ಯಕ್ರಮದ ಸಂಚಾಲಕ ಅಲೋನ್ಸ ಡಿ ಕೋಸ್ಟಾ ತಿಳಿಸಿದ್ದಾರೆ.

ಪುರಸ್ಕಾರಕ್ಕೆ ಭಾಜನರಾದ ಕವಯತ್ರಿ ಫ್ಲಾವಿಯಾ ಅಲ್ಬುಕರ್ಕ್ ಅವರಿಗೆ ಮಕಾನದಾರ ಸಾಹಿತ್ಯ ಪ್ರತಿಷ್ಠಾನ ಹಾಗೂ ನಿರಂತರ ಪ್ರಕಾಶನ ವತಿಯಿಂದ ‘ನಿರಂತರ ಸಾಹಿತ್ಯ ಪುರಸ್ಕಾರ’ವೂ ಲಭಿಸಿರುವುದು ವಿಶೇಷವಾಗಿದೆ.

ನಿರಂತರ ಪ್ರಕಾಶನದಿಂದ ಪ್ರಕಟಗೊಂಡ ನಾಡಿನ ವಿವಿಧ ಲೇಖಕರ ಕೃತಿಗಳಿಗೆ ಈಗಾಗಲೇ ಹಲವು ಪ್ರತಿಷ್ಠಿತ ಪುರಸ್ಕಾರಗಳು ಲಭಿಸಿದ್ದು, ಪ್ರಕಾಶನ ಸಂಸ್ಥೆಯ ಸದ್ದಿಲ್ಲದ ಸಾಹಿತ್ಯ ಸೇವೆಗೆ ರಾಜ್ಯಾದ್ಯಂತ ಮೆಚ್ಚುಗೆ ವ್ಯಕ್ತವಾಗಿದೆ.

ಬೀದರ್ ಜಿಲ್ಲೆಯ ಬೇಲೂರ ಗ್ರಾಮದಲ್ಲಿ ನಡೆದ ಉರಿಲಿಂಗ ಪೆದ್ದಿ ಮತ್ತು ಕಾಳವ್ವೆ ಉತ್ಸವದ ಅಂಗವಾಗಿ ಆಯೋಜಿಸಿದ್ದ ಕರ್ನಾಟಕ ರಾಜ್ಯ ಪ್ರಥಮ ಪ್ರಕಾಶಕರ ಸಮ್ಮೇಳನದಲ್ಲಿ ನಿರಂತರ ಪ್ರಕಾಶನಕ್ಕೆ ‘ಉತ್ತಮ ಪ್ರಕಾಶನ ಪ್ರಶಸ್ತಿ’ ನೀಡಿ ಗೌರವಿಸಲಾಗಿತ್ತು.

ಹಿರಿಯ ಸಾಹಿತಿ ಎ.ಎಸ್. ಮಕಾನದಾರ, ವೇದಾಂತ ಕ್ರಿಯೇಷನ್ ಹಾಗೂ ಭವಾನಿ ಪ್ರಿಂಟರ್ಸ್‌ನ ಮಾಲೀಕ-ಮುದ್ರಕ ಗಣೇಶ್ ಪವಾರ, ಸಾಹಿತಿ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಮೀರ್ ನಾಯಕ, ಸಮಾಜಸೇವಕ ಕೆ.ಆರ್. ಸುಣಗಾರ ಸೇರಿದಂತೆ ಹಲವರು ಕವಯತ್ರಿ ಫ್ಲಾವಿಯಾ ಅಲ್ಬುಕರ್ಕ್ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

**ತೇವಾಂಶ ಖಚಿತವಾದ ಬಳಿಕವೇ ಬಿತ್ತನೆ ಕೈಗೊಳ್ಳಿ -ಬೀಜ, ಗೊಬ್ಬರ ಕೊರತೆ ಇಲ್ಲವೆಂದ ಕೃಷಿ ಇಲಾಖೆ**

# ಮುಂಗಾರು ಬಿತ್ತನೆಗೆ ರೈತರಿಗೆ ಮಹತ್ವದ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ 2026-27ನೇ ಸಾಲಿನ ಪೂರ್ವ ಮುಂಗಾರು ಮಳೆ ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರು ಮಾಗಿ ಉಳುಮೆ ಕೈಗೊಳ್ಳಲು ಇದು ಸೂಕ್ತ ಸಮಯವಾಗಿದ್ದು, ಮಣ್ಣಿನಲ್ಲಿ ಸಂಪೂರ್ಣ ತೇವಾಂಶವಾದ ಬಳಿಕವೇ ಬಿತ್ತನೆ ಕೈಗೊಳ್ಳುವಂತೆ ಕೃಷಿ ಇಲಾಖೆ ಸಲಹೆ ನೀಡಿದೆ.

ಇಳಿಜಾರಿಗೆ ಅಡ್ಡವಾಗಿ ಬದು ನಿರ್ಮಾಣ ಮಾಡಿಕೊಂಡಲ್ಲಿ ಬಿದ್ದ ಮಳೆಯ ನೀರನ್ನು ಜಮೀನಿನಲ್ಲಿಯೇ ಹಿಡಿದಿಟ್ಟುಕೊಳ್ಳಬಹುದು. ರೈತರು ಅವಸರದಲ್ಲಿ ಬಿತ್ತನೆ ಕೈಗೊಳ್ಳದೇ, ಮಣ್ಣಿನಲ್ಲಿ ಸಂಪೂರ್ಣ ತೇವಾಂಶವಾದ ಬಳಿಕವೇ ಬಿತ್ತನೆ ಮಾಡುವಂತೆ ಇಲಾಖೆ ಸೂಚಿಸಿದೆ. ಇಲ್ಲದಿದ್ದಲ್ಲಿ ಬಿತ್ತಿದ ಬೀಜಗಳು ಸಮರ್ಪಕವಾಗಿ ಮೊಳಕೆ ಬರದೇ ಇರಬಹುದು ಅಥವಾ ಬೆಳೆಯ ಬೆಳವಣಿಗೆಯ ವೇಳೆಯಲ್ಲಿ ತೇವಾಂಶ ಕೊರತೆ ಉಂಟಾಗುವ ಸಾಧ್ಯತೆ ಇದೆ



ಎಂದು ಎಚ್ಚರಿಕೆ ನೀಡಲಾಗಿದೆ.

ರೈತರು ತಮ್ಮ ಜಮೀನಿನ ಮಣ್ಣು ಪರೀಕ್ಷೆ ಮಾಡಿಸಿ, ವಿಶ್ಲೇಷಣಾ ವರದಿಯ ಆಧಾರದ ಮೇಲೆ ಬೆಳೆಗಳಿಗೆ ರಸಗೊಬ್ಬರ ಹಾಗೂ ಸಾವಯವ ಗೊಬ್ಬರಗಳನ್ನು ನೀಡಬೇಕು. ಸಮಗ್ರ ಪೋಷಕಾಂಶ ನಿರ್ವಹಣಾ ಪದ್ಧತಿ ಅನುಸರಿಸಿದಲ್ಲಿ ಭೂಮಿಯ ಫಲವತ್ತತೆ ಹಾಗೂ ಉತ್ಪಾದಕತೆಯನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಇಲಾಖೆ ತಿಳಿಸಿದೆ.

ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಕೊರತೆಯಾಗದಂತೆ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಮಾಡಲಾಗಿದ್ದು, ರೈತರು ಆತಂಕಪಡುವ ಅಗತ್ಯವಿಲ್ಲ ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಹಿಂದಿನ ಹಂಗಾಮಿನಂತೆ ಈ ವರ್ಷವೂ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಿಸಲಾಗುವುದು. ಕರ್ನಾಟಕ ರಾಜ್ಯ ಬೀಜ ನಿಗಮ, ರಾಷ್ಟ್ರೀಯ ಬೀಜ ನಿಗಮ ಹಾಗೂ ಖಾಸಗಿ ಮಳಿಗೆಗಳಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜ ಸಂಗ್ರಹಿಸಲಾಗಿದೆ. ಇಲಾಖೆಯ ಮೂಲಕ ಬೀಜ ಬದಲಾವಣೆ ಅನುಪಾತದನ್ವಯ ಮೆಕ್ಕೆಜೋಳ ಹೊರತುಪಡಿಸಿ ಉಳಿದ ಬೆಳೆಗಳಿಗೆ ಶೇ.33ರಷ್ಟು ಬೀಜ ವಿತರಣೆ ಮಾಡಲಾಗುವುದು ಎಂದು ತಿಳಿಸಲಾಗಿದೆ. ರೈತರು ಹಿಂದಿನ ಹಂಗಾಮಿನಲ್ಲಿ ಕಾಯ್ದಿರಿಸಿಕೊಂಡ ಬೀಜಗಳನ್ನು ಸಹ ಬಳಸಿಕೊಳ್ಳುವಂತೆ ಇಲಾಖೆ ಮನವಿ ಮಾಡಿದೆ.

ಬಿತ್ತನೆಗೂ ಮುನ್ನ ಕಡ್ಡಾಯವಾಗಿ ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಿಕೊಳ್ಳುವಂತೆ ರೈತ ಬಂಧುಗಳಿಗೆ ಸೂಚಿಸಲಾಗಿದೆ. ಹೆಸರು ಬೆಳೆಗೆ ಪ್ರತಿ ಕೆ.ಜಿ. ಬೀಜಕ್ಕೆ 35 ರಿಂದ 40 ಗ್ರಾಂ ರೈಜೋಬಿಯಂ ಬಳಸಿ ಬೀಜೋಪಚಾರ ಮಾಡಿದಲ್ಲಿ ಬೆಳೆಯ ಪ್ರಾಥಮಿಕ ಹಂತದಲ್ಲಿ ಸಾರಜನಕ ಸಮರ್ಪಕವಾಗಿ ಲಭ್ಯವಾಗಿ ಉತ್ತಮ ಬೆಳವಣಿಗೆಗೆ ನೆರವಾಗುತ್ತದೆ.

ಪ್ರತಿ ಕೆ.ಜಿ. ಬೀಜಕ್ಕೆ 10 ಗ್ರಾಂ ಟ್ರೈಕೋಡರ್ಮಾ ಬಳಸಿ ಬೀಜೋಪಚಾರ ಮಾಡಿದಲ್ಲಿ ಸರ್ಕೋಸ್ಪೋರಾ ಎಲೆಚುಕ್ಕೆ ರೋಗವನ್ನು ನಿಯಂತ್ರಿಸಬಹುದು. ಗೋವಿನ ಜೋಳದಲ್ಲಿ ಪ್ರತಿ ಕೆ.ಜಿ. ಬೀಜಕ್ಕೆ 25 ಗ್ರಾಂ ರಂಜಕ ಕರಗಿಸುವ ಅಣುಜೀವಿ ಹಾಗೂ 6 ಗ್ರಾಂ ಟ್ರೈಕೋಡರ್ಮಾ ಜೈವಿಕ ಶಿಲೀಂಧ್ರನಾಶಕ ಬಳಸಿ ಬೀಜೋಪಚಾರ ಮಾಡುವುದರಿಂದ ಕಾಂಡ ಕಪ್ಪು ಕೊಳೆ ರೋಗವನ್ನು ನಿಯಂತ್ರಿಸಬಹುದಾಗಿದೆ ಎಂದು ಇಲಾಖೆ ತಿಳಿಸಿದೆ.

ಅರ್ಝೋಸ್ಪಿರಿಲಂ, ರಂಜಕ ಕರಗಿಸುವ ಜೈವಿಕ ಗೊಬ್ಬರಗಳನ್ನು ಬಳಕೆ ಮಾಡುವುದರಿಂದ ಬೆಳೆಗಳಿಗೆ ಪೋಷಕಾಂಶ ಸಮರ್ಪಕವಾಗಿ ಲಭ್ಯವಾಗಲಿದೆ. ಶೇಂಗಾ ಬೆಳೆಗೆ ರೈಜೋಬಿಯಂ ಹಾಗೂ ರಂಜಕ ಕರಗಿಸುವ ಜೈವಿಕ ಗೊಬ್ಬರ ಬಳಸಿ ಬೀಜೋಪಚಾರ ಮಾಡುವಂತೆ ಸಲಹೆ ನೀಡಲಾಗಿದೆ.

ಅಧಿಕೃತ ಪರವಾನಗಿ ಹೊಂದಿರುವ ಮಳಿಗೆಗಳಿಂದ ಮಾತ್ರ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು. ನಿಗದಿತ ಗರಿಷ್ಠ ಚಿಲ್ಲರೆ ದರಕ್ಕಿಂತ ಹೆಚ್ಚಿನ ಬೆಲೆಯಲ್ಲಿ ಕೃಷಿ ಪರಿಕರ ಮಾರಾಟ ಮಾಡಿದಲ್ಲಿ ಸಮೀಪದ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳು ಅಥವಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಗಮನಕ್ಕೆ ತರಬೇಕು. ಅಂತಹವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> "ಮುಂಗಾರು ಆರಂಭಕ್ಕೂ ಮುನ್ನ ವೈಜ್ಞಾನಿಕ ರೀತಿಯಲ್ಲಿ ಜಮೀನು ಸಿದ್ಧಪಡಿಸಿ, ಮಣ್ಣಿನಲ್ಲಿ ಸಮರ್ಪಕ ತೇವಾಂಶವಾದ ಬಳಿಕ ಬಿತ್ತನೆ ಮಾಡಿದರೆ ಉತ್ತಮ ಮೊಳಕೆ ಹಾಗೂ ಹೆಚ್ಚಿನ ಇಳುವರಿ ಪಡೆಯಲು ಸಾಧ್ಯವಾಗುತ್ತದೆ."
> **- ಚೇತನಾ ಪಾಟೀಲ,**
> ಜಂಟಿ ಕೃಷಿ ನಿರ್ದೇಶಕರು

### ಜಿಲ್ಲೆಯ ಮುಂಗಾರು ಬಿತ್ತನೆ ಗುರಿ

2026-27ನೇ ಸಾಲಿಗೆ 3,13,719 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಯೋಜನೆ

1. ಮೆಕ್ಕೆಜೋಳ : 1,55,463 ಹೆಕ್ಟೇರ್
2. ಹೆಸರು : 1,17,000 ಹೆಕ್ಟೇರ್
3. ಶೇಂಗಾ : 14,485 ಹೆಕ್ಟೇರ್
4. ಸೂರ್ಯಕಾಂತಿ : 8,115 ಹೆಕ್ಟೇರ್
5. ಹತ್ತಿ : 9,000 ಹೆಕ್ಟೇರ್

**"ಮಕ್ಕಳನ್ನು ಬುದ್ಧಿವಂತರ ಜೊತೆಗೆ ಹೃದಯವಂತರನ್ನಾಗಿಯೂ ರೂಪಿಸಬೇಕು" - ಮರಿ ಶಾಂತವೀರ ಮಹಾಸ್ವಾಮಿಗಳು**

# 25 ವರ್ಷಗಳ ಬಳಿಕ ಗುರು-ಶಿಷ್ಯರ ಭಾವನಾತ್ಮಕ ಸಮ್ಮಿಲನ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮಕ್ಕಳನ್ನು ಕೇವಲ ಬುದ್ಧಿವಂತರನ್ನಾಗಿ ಮಾಡುವುದಷ್ಟೇ ಅಲ್ಲ, ಹೃದಯವಂತರನ್ನಾಗಿಯೂ ರೂಪಿಸಿದಾಗ ಶಿಕ್ಷಣಕ್ಕೆ ನಿಜವಾದ ಸಾರ್ಥಕತೆ ದೊರೆಯುತ್ತದೆ ಎಂದು ಮರಿ ಶಾಂತವೀರ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ರೇಣುಕಾ ಸಂಯುಕ್ತ ಪದವಿ ಪೂರ್ವ ಕಾಲೇಜು ಆವರಣದಲ್ಲಿ 1999-2002ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ವತಿಯಿಂದ ಆಯೋಜಿಸಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



"ರಸ್ತೆಯಲ್ಲಿ ಬಿದ್ದಿರುವ ಮುಳ್ಳು ನಮಗೆ ಚುಚ್ಚದಂತೆ ತಪ್ಪಿಸಿಕೊಂಡು ಹೋಗುವುದು ಸಾಮಾನ್ಯ. ಆದರೆ ಅದೇ ಮುಳ್ಳು ಮತ್ತೊಬ್ಬರಿಗೆ ಚುಚ್ಚದಂತೆ ತೆಗೆದು ಹಾಕುವ ಮನೋಭಾವನೆ ಹೃದಯವಂತಿಕೆಯ ಸಂಕೇತ" ಎಂದು ಹೇಳಿದರು.

"ಶಿಕ್ಷಣ ಕಲಿಯುವಾಗ ಇತರರು ಏನು ಮಾತನಾಡುತ್ತಾರೆ ಎಂಬ ಭ್ರಮೆಯಿಂದ ಹೊರಬಂದು ಗುರಿಯತ್ತ ಚಿತ್ತವಿಟ್ಟು ಸಾಧನೆಯ ಮೆಟ್ಟಿಲು ಏರಬೇಕು" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಹೆಚ್.ಎಂ. ಕೊಟ್ರಯ್ಯ ಮಾತನಾಡಿ, "ಗುರು-ಶಿಷ್ಯರ ಸಂಬಂಧ ಅನ್ಯೋನ್ಯ ಎಂಬುದಕ್ಕೆ ಇಂತಹ ಗುರುವಂದನಾ ಕಾರ್ಯಕ್ರಮಗಳು ಸಾಕ್ಷಿಯಾಗಿವೆ. 25 ವರ್ಷಗಳ ಬಳಿಕ ಸಹಪಾಠಿಗಳು ಹಾಗೂ ಶಿಕ್ಷಕರು ಒಂದೇ ವೇದಿಕೆಯಲ್ಲಿ ಸೇರುವುದು ಸಂತಸದ ಕ್ಷಣ" ಎಂದರು.

ಶಿಕ್ಷಕ ಪದ್ಮಣ್ಣ ಮಾತನಾಡಿ, "25 ವರ್ಷಗಳ ಬಳಿಕ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಒಂದೆಡೆ ಸೇರಿಸಿ ಗೌರವಿಸುವುದು ನಿಜಕ್ಕೂ ಹೆಮ್ಮೆಯ ಕೆಲಸ" ಎಂದು ಹೇಳಿದರು.

ಶಿಕ್ಷಕ ಜಾತಪ್ಪ ಮಾತನಾಡಿ, "ಹಿಂದೆ ಗುರುಗಳನ್ನು ಗೌರವದಿಂದ ಕಾಣುತ್ತಿದ್ದ ವಿದ್ಯಾರ್ಥಿಗಳು ಇಂದು ಶಿಕ್ಷಕರ ಎದುರೇ ಸೌಜನ್ಯ ಕಳೆದುಕೊಳ್ಳುತ್ತಿರುವುದು ನೋವಿನ ಸಂಗತಿ" ಎಂದು ಖೇದ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಂ.ಟಿ. ಸಿದ್ದೇಶ, ಶಿಕ್ಷಕರಾದ ಶಿವಪ್ರಕಾಶ, ಅಕ್ಕಿ ಪ್ರಕಾಶ, ಬಣಕಾರ, ಹರ್ಷವರ್ಧನ, ಶಂಭುಲಿಂಗಯ್ಯ, ಶಿವಮೂರ್ತಿ, ಶಂಕ್ರಪ್ಪ ಸೇರಿದಂತೆ ಹಲವರು ಮಾತನಾಡಿದರು. ರೂಪದೇವಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಬೆಟ್ಟಪ್ಪ, ಆಶೋಕ ಹಾಗೂ ಹಳೆಯ ವಿದ್ಯಾರ್ಥಿಗಳಾದ ಹೆಚ್.ಎಂ. ರವಿ, ಚೇತನ, ಹರೀಷ್ ರೆಡ್ಡಿ, ಗುಡದಯ್ಯ, ಲೋಕೇಶ್, ಖಾಜಾ, ಕೊಟ್ರೇಶ, ಪಂಪಾಪತಿ, ಗಂಗಾಧರ, ವೀರಭದ್ರಯ್ಯ, ಹೊನ್ನೂರಪ್ಪ, ವಾಣಿ, ವೀಣಾ, ಜಗದೀಶ ಗೌಡ, ಬೆಣ್ಣಿಗೌಡ್ರ ಆನಂದ, ರಾಜಾವಲಿ ಗಡ್ಡದ್, ಪ್ರಮೋದಿನಿ, ಹರಿಣಾಕ್ಷಿ, ಕುಸುಮಾ, ನಂದಿನಿ, ಸುಮಿತ್ರ, ಮಮತಾ, ಜಾನ್ಹಾವಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಆಯೇಷಾ ಗಡ್ಡದ್ ಹಾಗೂ ಸನಾ ಫರ್ಹಿನ್ ಗಡ್ಡದ್ ಪ್ರಾರ್ಥಿಸಿದರು. ಆಶ್ವಿನಿ ಕಾರ್ಯಕ್ರಮ ನಿರೂಪಿಸಿದರು. ಸುಮಿತ್ರಾ ಸ್ವಾಗತಿಸಿದರು.

# ಸಂಭ್ರಮದ ಗುಂಡೇಶ್ವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಯಳವತ್ತಿ ಗ್ರಾಮದ ಆರಾಧ್ಯದೈವ ಶ್ರೀ ಗುಂಡೇಶ್ವರ ದೇವಸ್ಥಾನ ಜಾತ್ರಾಮಹೋತ್ಸವದ ಅಂಗವಾಗಿ ಮಂಗಳವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ರಥೋತ್ಸವ ವಿಜೃಂಭಣೆಯಿಂದ ನೆರವೇರಿತು.



ಯಳವತ್ತಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಜಾತ್ರಾಮಹೋತ್ಸವಕ್ಕೆ ಆಗಮಿಸಿದ್ದ ಭಕ್ತರು "ಹರ ಹರ ಮಹಾದೇವ", "ಶ್ರೀ ಗುಂಡೇಶ್ವರ ಮಹಾರಾಜ ಕೀ ಜೈ" ಎಂಬ ಘೋಷಣೆಗಳನ್ನು ಮೊಳಗಿಸಿ ಭಕ್ತಿಭಾವ ಮೆರೆದರು.

ಜಾತ್ರಾಮಹೋತ್ಸವ ಅಂಗವಾಗಿ ಬೆಳಗ್ಗಿನಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ತೊಟ್ಟು ತಂಡೋಪ ತಂಡವಾಗಿ ದೇವಸ್ಥಾನಕ್ಕೆ ಆಗಮಿಸಿದರು. ಹಣ್ಣು-ಕಾಯಿ ನೈವೇದ್ಯ ಸಲ್ಲಿಸಿ, ರಥಕ್ಕೆ ಉಡಿ ತುಂಬಿ ಹೊಸ ವಸ್ತ್ರಾಭರಣಗಳನ್ನು ಸಮರ್ಪಿಸಿ ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಿದರು.

ಸಂಜೆ ಸಕಲ ವಾದ್ಯ ವೈಭವಗಳೊಂದಿಗೆ ನಡೆದ ರಥೋತ್ಸವದಲ್ಲಿ ಅಪಾರ ಭಕ್ತರು ಭಕ್ತಿ ಭಾವದಿಂದ ಉತ್ತತ್ತಿ ಹಾಗೂ ಹಣ್ಣುಗಳನ್ನು ತೇರಿಗೆ ಎಸೆದು ಸಂಭ್ರಮಿಸಿದರು.

ಬುಧವಾರ ಕಡುಬಿನ ಕಾಳಗ ಕಾರ್ಯಕ್ರಮ ನಡೆಯಲಿದ್ದು, ಈ ಭಾಗದ ದೊಡ್ಡ ಜಾತ್ರೆಗಳಲ್ಲಿ ಒಂದಾದ ಶಿರಹಟ್ಟಿ ಫಕ್ಕಿರೇಶ್ವರ ಮಠ ಜಾತ್ರೆಯ 9ನೇ ದಿನ ನಡೆಯುವ ಗುಂಡೇಶ್ವರ ಜಾತ್ರೆಯೊಂದಿಗೆ ಈ ಭಾಗದ ಜಾತ್ರಾಮಹೋತ್ಸವಗಳು ಸಂಪನ್ನಗೊಳ್ಳಲಿವೆ.

# ಜಿಲ್ಲಾ ಮಟ್ಟದ ಯೋಗಾಸನ ಚಾಂಪಿಯನ್‌ಶಿಪ್‌ಗೆ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ವತಿಯಿಂದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಹಾಗೂ ಕರ್ನಾಟಕ ರಾಜ್ಯ ಯೋಗಾಸನ ಚಾಂಪಿಯನ್‌ಶಿಪ್–2026 ಸ್ಪರ್ಧೆಗೆ ಗದಗ ಜಿಲ್ಲಾ ತಂಡದ ಆಯ್ಕೆ ಪ್ರಕ್ರಿಯೆ ಅಂಗವಾಗಿ ಜಿಲ್ಲಾ ಮಟ್ಟದ ಯೋಗಾಸನ ಸ್ಪೋರ್ಟ್ಸ್ ಚಾಂಪಿಯನ್‌ಶಿಪ್–2026 ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಸ್ಪರ್ಧೆಗಳು ಮೇ 30ರಂದು ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ಸಿದ್ಧಲಿಂಗನಗರದ ಬಸವ ಯೋಗ ಮಂದಿರದಲ್ಲಿ ನಡೆಯಲಿವೆ.

8 ವರ್ಷದಿಂದ 45 ವರ್ಷ ಮೇಲ್ಪಟ್ಟ ವಯೋಮಿತಿಯ ಸ್ಪರ್ಧಿಗಳಿಗೆ ಒಟ್ಟು 12 ವಿಭಾಗಗಳಲ್ಲಿ ಮಹಿಳೆ ಮತ್ತು ಪುರುಷರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳು ನಡೆಯಲಿವೆ.

ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ನಿಗದಿಪಡಿಸಿರುವ 10 ಯೋಗಾಸನಗಳನ್ನು ಪ್ರದರ್ಶಿಸಬೇಕಿದ್ದು, ಪ್ರತಿಯೊಂದು ಆಸನದ ಅಂತಿಮ ಸ್ಥಿತಿಯಲ್ಲಿ 15 ಸೆಕೆಂಡ್‌ಗಳ ಕಾಲ ಸ್ಥಿರವಾಗಿ ಉಳಿಯಬೇಕು.

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪದಕ, ಪ್ರಶಸ್ತಿ ಪತ್ರ ನೀಡಲಾಗುವುದು. ಭಾಗವಹಿಸಿದ ಎಲ್ಲ ಸ್ಪರ್ಧಿಗಳಿಗೂ ಪ್ರಮಾಣಪತ್ರ ವಿತರಿಸಲಾಗುತ್ತದೆ.

ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ಸ್ಪರ್ಧಿಗಳು ರಾಜ್ಯ ಮಟ್ಟದ ಸ್ಪರ್ಧೆಗೆ ಗದಗ ಜಿಲ್ಲಾ ತಂಡದಲ್ಲಿ ಆಯ್ಕೆಯಾಗಲಿದ್ದು, ಅವರ ಪ್ರವೇಶ ಶುಲ್ಕವನ್ನು ಸಂಘಟನೆಯೇ ಭರಿಸಲಿದೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಸ್ಪರ್ಧೆಗೆ ನಿಗದಿಪಡಿಸಿರುವ ಆಸನಗಳ ಚಿತ್ರಪಟ ಮತ್ತು ಹೆಸರು ನೋಂದಣಿಗಾಗಿ ದೂರವಾಣಿ ಸಂಖ್ಯೆ 9448317188 ಹಾಗೂ 7624822319 ಸಂಪರ್ಕಿಸಬಹುದಾಗಿದೆ.

ಯೋಗಾಸನ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯೋಗಾಸನ ಕ್ರೀಡೆಗೆ ಉತ್ತೇಜನ ನೀಡುವಂತೆ ಸಂಘದ ಅಧ್ಯಕ್ಷ ಕೆ.ಎಸ್. ಪಲ್ಲೇದ ಹಾಗೂ ಕಾರ್ಯದರ್ಶಿ ಚೇತನ ಚುಂಚಾ ಮನವಿ ಮಾಡಿದ್ದಾರೆ.

## ದೇಶದ ಭದ್ರತೆ ವಿಚಾರದಲ್ಲೂ ರಾಜಕೀಯವೇ?

▶▶ ಮೊದಲನೇ ಪುಟದಿಂದ

ನ್ಯಾಯಸಮ್ಮತ ಸಮಯ ನೀಡದ ಕಾರಣ ಮೂವರು ಸದಸ್ಯರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು. ಇದೀಗ ಸುಪ್ರೀಂಕೋರ್ಟ್ ತಡೆಯಾಜ್ಞೆ ನೀಡಿರುವುದು ಸಂತೋಷದ ವಿಚಾರ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ನಗರಸಭೆ ಸದಸ್ಯೆ ಉಷಾ ದಾಸರ, ಮುಖಂಡರಾದ ಎಂ.ಎಂ. ಹಿರೇಮಠ ಸೇರಿದಂತೆ ಅನೇಕರಿದ್ದರು.

**ಡಂಬಳ ಹೋಬಳಿಯಲ್ಲಿ 10ಕ್ಕೂ ಹೆಚ್ಚು ಬೋರವೆಲ್ ಸಂಪರ್ಕ ಕಳವು – ಮುಂಗಾರು ಬಿತ್ತನೆ ಮಧ್ಯೆಯೇ ಅನ್ನದಾತರಿಗೆ ಸಂಕಷ್ಟ!**

# ಕೇಬಲ್ ಕಳ್ಳರ ಕಾಟಕ್ಕೆ ಕಂಗಾಲಾದ ರೈತರು!

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಗಾರು ಬಿತ್ತನೆ ಕಾರ್ಯದ ನಡುವೆಯೇ ಡಂಬಳ ಹೋಬಳಿಯ ರೈತರಿಗೆ ಕೇಬಲ್ ಕಳ್ಳರು ಭಾರೀ ಶಾಕ್ ನೀಡಿದ್ದಾರೆ. ಗ್ರಾಮದಲ್ಲಿನ 10ಕ್ಕೂ ಹೆಚ್ಚು ರೈತರ ಕೊಳವೆ ಬಾವಿಗಳ ಕೇಬಲ್ ಹಾಗೂ ವಿದ್ಯುತ್ ಉಪಕರಣಗಳನ್ನು ಕಳ್ಳರು ಸೋಮವಾರ ರಾತ್ರಿ ಕಳವು ಮಾಡಿರುವ ಘಟನೆ ನಡೆದಿದೆ.

ಮಂಗಳವಾರ ಬೆಳಗಿನ ಜಾವ ಮೋಟಾರ್ ಚಾಲನೆ ಆಗದ ಹಿನ್ನೆಲೆಯಲ್ಲಿ ರೈತರು ಜಮೀನುಗಳಿಗೆ ತೆರಳಿ ಪರಿಶೀಲಿಸಿದಾಗ ಕೇಬಲ್ ಕಳ್ಳತನವಾಗಿರುವುದು ಬೆಳಕಿಗೆ ಬಂದಿದೆ.

ಮಳೆ ಅಭಾವದ ಹಿನ್ನೆಲೆಯಲ್ಲಿ ರೈತರು ಈಗಾಗಲೇ ಕೊಳವೆಬಾವಿ ಮೋಟಾರ್‌ಗಳನ್ನು ಚಾಲನೆ ಮಾಡಿ ಬೆಳೆಗಳಿಗೆ ನೀರು ಹರಿಸುತ್ತಿದ್ದರು. ಮುಂಗಾರು ಬಿತ್ತನೆಗಾಗಿ ಭೂಮಿ ಹದಗೊಳಿಸಿ ಕೆಲವರು ಬಿತ್ತನೆ ಕಾರ್ಯವೂ ಆರಂಭಿಸಿದ್ದರು. ಇಂತಹ ಸಂದರ್ಭದಲ್ಲಿ ಬೋರವೆಲ್‌ಗಳ ಕೇಬಲ್ ಕಳ್ಳತನವಾಗಿರುವುದು ರೈತರ ಆತಂಕ ಹೆಚ್ಚಿಸಿದೆ.

ಡಂಬಳ ಹೋಬಳಿಯ 24 ಗ್ರಾಮಗಳಲ್ಲಿ ಬೋರವೆಲ್‌ಗಳ ಸ್ಟಾರ್ಟರ್ ಡಬ್ಬಿಗಳು, ಹನಿ ನೀರಾವರಿ ಯೋಜನೆಯಡಿ ನೆಟಾಫಿಮ್ ಹಾಗೂ ಮೇಗಾ ಕಂಪನಿಗಳು ಅಳವಡಿಸಿರುವ ಲ್ಯಾಟರಲ್ ಪೈಪುಗಳು, ವಿಂಡ್ ಫ್ಯಾನ್‌ಗಳಿಗೆ ಅಳವಡಿಸಿದ ದುಬಾರಿ ಕೇಬಲ್ ವೈರ್, ಬೋರವೆಲ್ ಪೈಪುಗಳು ಸೇರಿದಂತೆ ಹಲವು ವಿದ್ಯುತ್ ಉಪಕರಣಗಳು ನಿರಂತರವಾಗಿ ಕಳ್ಳತನವಾಗುತ್ತಿವೆ ಎಂದು ರೈತರು ಆರೋಪಿಸಿದ್ದಾರೆ.

ಕೇಬಲ್ ಕಳ್ಳರ ಕಾಟದಿಂದ ನೂರಾರು ರೈತರು ಹೈರಾಣಾಗಿದ್ದು, ಪೊಲೀಸ್ ಠಾಣೆಗೆ ದೂರು ನೀಡಿದರೂ ಪ್ರಯೋಜನವಾಗುತ್ತಿಲ್ಲ ಎಂಬ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೆಲ ಪ್ರಕರಣಗಳಲ್ಲಿ ದೂರು ದಾಖಲಾಗಿದ್ದರೂ ಕಳ್ಳರನ್ನು ಪತ್ತೆಹಚ್ಚಿ ಕಳುವಾದ ಸಾಮಗ್ರಿ ವಶಪಡಿಸಿಕೊಳ್ಳುವ ಕಾರ್ಯ ನಡೆಯುತ್ತಿಲ್ಲ ಎಂದು ರೈತರು ಬೇಸರ ವ್ಯಕ್ತಪಡಿಸಿದ್ದಾರೆ.

ಮತ್ತೆ ಹೊಸದಾಗಿ ಸಂಪರ್ಕ ಕಲ್ಪಿಸಿ ಬೆಳೆಗಳಿಗೆ ನೀರು ಹರಿಸಲು ರೈತರು ಸಾಲ–ಸೂಲ ಮಾಡಿ ಖರ್ಚು ಮಾಡುವ ಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸಾಕಷ್ಟು ಸಮಯವೂ ಬೇಕಾಗುತ್ತಿದ್ದು, ಬೆಳೆಗಳು ಒಣಗುವ ಭೀತಿ ಎದುರಾಗಿದೆ.

ಇತ್ತೀಚೆಗೆ ಬಿತ್ತನೆ ಕಾರ್ಯ ಆರಂಭಿಸಿರುವ ರೈತರು ಮಳೆಗಾಲದಲ್ಲಿಯೇ ಬೋರ್‌ವೆಲ್ ಆಶ್ರಯಿಸಿದ್ದ ಸಂದರ್ಭದಲ್ಲಿ ಕೇಬಲ್ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿರುವುದು ಅನ್ನದಾತರ ನಿದ್ದೆಗೆಡಿಸಿದೆ.

ಡೋಣಿ ಗ್ರಾಮ, ಡಂಬಳ ಹಾಗೂ ಮೇವುಂಡಿ ಗ್ರಾಮದ ಮಧ್ಯದ ಜಮೀನುಗಳಲ್ಲಿ ರೈತರ ವೈರ್, ಕೇಬಲ್ ಹಾಗೂ ಪಂಪ್‌ಸೆಟ್‌ಗಳಿಗೆ ಬೇಕಾಗುವ ವಿದ್ಯುತ್ ಉಪಕರಣಗಳ ಕಳ್ಳತನ ನಿರಂತರವಾಗಿ ನಡೆಯುತ್ತಿದೆ. ಲಕ್ಷಾಂತರ ರೂಪಾಯಿ ಮೌಲ್ಯದ ಕೇಬಲ್ ಕಳುವಾಗಿದ್ದು, ಕಳ್ಳರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ರೈತರಿಗೆ ಪರಿಹಾರ ನೀಡಬೇಕು ಎಂದು ರೈತರು ಸರ್ಕಾರವನ್ನು ಒತ್ತಾಯಿಸಿದ್ದಾರೆ.



> “ದುಬಾರಿ ಬೀಜ, ಗೊಬ್ಬರ ಖರೀದಿಸುವುದೇ ಕಷ್ಟವಾಗಿರುವ ಸಂದರ್ಭದಲ್ಲಿ 350 ಮೀಟರ್‌ಗೂ ಹೆಚ್ಚು ಕೇಬಲ್ ಕಳ್ಳತನವಾಗಿರುವುದು ರೈತರಿಗೆ ದೊಡ್ಡ ಹೊಡೆತವಾಗಿದೆ. ಕೂಡಲೇ ಕಳ್ಳರನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಬೇಕು.”
>
> **– ಮಹೇಶ ಗಡಗಿ, ಬಸವರಾಜ ಹಂಚನಾಳ, ಮಾಂತೇಶ ಪ್ಯಾಟಿ, ಶರಣಪ್ಪ ಪ್ಯಾಟಿ, ವಿಕಾಶ ಗಡಗಿ, ಯಂಕಣ್ಣ ಗಡಗಿ, ಡಂಬಳ ಗ್ರಾಮದ ರೈತರು**

> “ರೈತರ ಕೇಬಲ್ ಹಾಗೂ ವಿದ್ಯುತ್ ಉಪಕರಣ ಕಳ್ಳತನ ಪ್ರಕರಣ ನಮ್ಮ ಗಮನಕ್ಕೆ ಬಂದಿದೆ. ಮುಂದಿನ ದಿನಗಳಲ್ಲಿ ಕಳ್ಳತನ ತಡೆಗೆ ಕ್ರಮ ಕೈಗೊಂಡು, ಪೊಲೀಸರನ್ನು ನಿಯೋಜಿಸಿ ಕಳ್ಳರನ್ನು ಪತ್ತೆಹಚ್ಚಲಾಗುವುದು.”
>
> – **ಪ್ರಭುಗೌಡ,** ಡಿವೈಎಸ್‌ಪಿ, ನರಗುಂದ

### ಭಯದಲ್ಲಿ ರೈತರು

ರಾತ್ರಿ ವೇಳೆಯಲ್ಲಿ ಜಮೀನುಗಳಲ್ಲಿ ವಿದ್ಯುತ್ ಸರಬರಾಜು ಇಲ್ಲದಿರುವುದು ಹಾಗೂ ಕಳ್ಳರ ಭಯದಿಂದ ರೈತರು ಜಮೀನುಗಳಿಗೆ ತೆರಳುವುದೇ ಕಡಿಮೆಯಾಗಿದೆ. ಈ ಪರಿಸ್ಥಿತಿಯನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ಕಳ್ಳರು ಕೇಬಲ್ ಮಾತ್ರವಲ್ಲದೆ ನೀರು ಮೇಲೆತ್ತಲು ಬಳಸುವ ಪ್ಲಾಸ್ಟಿಕ್ ಹಾಗೂ ಕಬ್ಬಿಣದ ಪೈಪುಗಳನ್ನೂ ಹಾನಿಗೊಳಿಸುತ್ತಿದ್ದಾರೆ.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ


ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದೆ. 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90 ಹಾಗೂ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ವೀರಶೈವ ಲಿಂಗಾಯತ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ.

ಅಭ್ಯರ್ಥಿಗಳು ಮಹಾಸಭೆಯ ಅಧಿಕೃತ ಜಾಲತಾಣದಲ್ಲಿ ಮೇ 25ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು. ಅಂಚೆ, ಕೊರಿಯರ್ ಅಥವಾ ಖುದ್ದಾಗಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಮಹಾಸಭೆ ಸ್ಪಷ್ಟಪಡಿಸಿದೆ. ಗದಗ ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರದ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮನವಿ ಮಾಡಿದ್ದಾರೆ.

**ಪ್ರತಿ ಕ್ವಿಂಟಲ್‌ಗೆ ₹7721 ನಿಗದಿ – ಜಿಲ್ಲೆಯ 13 ಕೇಂದ್ರಗಳಲ್ಲಿ ಖರೀದಿ ವ್ಯವಸ್ಥೆ**

# ಸೂರ್ಯಕಾಂತಿ ಖರೀದಿಗೆ ಬೆಂಬಲ ಬೆಲೆ ಘೋಷಣೆ

■ ವಿಜಯಸಾಕ್ಷಿ ಸುದ್ದಿ, ಗದಗ



2025–26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್ಎಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿಯನ್ನು ಖರೀದಿಸಲು ಕೇಂದ್ರ ಸರ್ಕಾರ ಬೆಂಬಲ ಬೆಲೆ ನಿಗದಿಪಡಿಸಿದ್ದು, ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಭವನ ದಲ್ಲಿ ಹಿಂಗಾರು ಹಂಗಾಮಿನ ಸೂರ್ಯಕಾಂತಿ ಖರೀದಿ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ರೈತರಿಂದ ಎಕರೆಗೆ 4 ಕ್ವಿಂಟಲ್‌ನಂತೆ ಗರಿಷ್ಠ 20 ಕ್ವಿಂಟಲ್ ಎಫ್ಎಕ್ಯೂ ಗುಣಮಟ್ಟದ ಸೂರ್ಯಕಾಂತಿ ಖರೀದಿಸಲು ಅವಕಾಶ ನೀಡಲಾಗಿದೆ. ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ಉತ್ಪನ್ನ ತರುವುದನ್ನು ತಡೆಯಲು ಹಾಗೂ ಯಾವುದೇ ರೀತಿಯ ದುರುಪಯೋಗ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಆರ್. ಬಂಡಿ ಮಾತನಾಡಿ, ಎಫ್ಎಕ್ಯೂ ಗುಣಮಟ್ಟದ ಸೂರ್ಯಕಾಂತಿ ಉತ್ಪನ್ನಕ್ಕೆ ಪ್ರತಿ ಕ್ವಿಂಟಲ್‌ಗೆ ₹7721 ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿಗೆ 50 ದಿನಗಳ ಅವಧಿ ಹಾಗೂ ಖರೀದಿ ಪ್ರಕ್ರಿಯೆಗೆ 60 ದಿನಗಳ ಕಾಲಾವಕಾಶ ನಿಗದಿಪಡಿಸಲಾಗಿದೆ. ನೋಂದಣಿಯೊಂದಿಗೆ ಖರೀದಿ ಪ್ರಕ್ರಿಯೆಯನ್ನೂ ಆರಂಭಿಸಲಾಗುವುದು ಎಂದು ಹೇಳಿದರು.

ಎನ್‌ಸಿಸಿಎಫ್ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ, ಬೆಂಗಳೂರು ಸಂಸ್ಥೆಯ ಮೂಲಕ ಖರೀದಿ ಕಾರ್ಯ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

### ಖರೀದಿ ಕೇಂದ್ರಗಳ ವಿವರ

ಗದಗ ತಾಲೂಕು : ಹೊಂಬಳ
ನರಗುಂದ ತಾಲೂಕು : ನರಗುಂದ, ಚಿಕ್ಕನರಗುಂದ, ಕಣಕಿಕೊಪ್ಪ
ಕೊಣ್ಣೂರು : ಪಿಕೆಪಿಎಸ್ ಕೇಂದ್ರ
ಶಿರಹಟ್ಟಿ ತಾಲೂಕು : ರಣತೂರ
ಲಕ್ಷ್ಮೇಶ್ವರ ತಾಲೂಕು : ಶಿಗ್ಲಿ
ರೋಣ ತಾಲೂಕು : ಅಬ್ಬಿಗೇರಿ
ಗಜೇಂದ್ರಗಡ ತಾಲೂಕು : ನಿಡಗುಂದಿ
ಮುಂಡರಗಿ ತಾಲೂಕು : ಬರದೂರ, ಪೇಠಲೂರ, ಕಲಕೇರಿ

ಜಿಲ್ಲೆಯಲ್ಲಿ ಒಟ್ಟು 13 ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಗಿದೆ. ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಸಿಂಡಿಕೇಟ್ ಸದಸ್ಯರಾಗಿ ಧೃವರಾಜ ಹೊನ್ನಪ್ಪನವರ ನೇಮಕ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಶಿರಹಟ್ಟಿ ತಾಲೂಕಿನ ಧೃವರಾಜ ಹೊನ್ನಪ್ಪನವರ ಅವರನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸಿಂಡಿಕೇಟ್ ಸದಸ್ಯರಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಮೂರು ವರ್ಷದ ಅವಧಿಗೆ ಅಥವಾ ಸಿಂಡಿಕೇಟ್ ಮರುರಚನೆಯಾಗುವವರೆಗೂ ಈ ನೇಮಕ ಜಾರಿಯಲ್ಲಿರಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

**ಅಕ್ರಮ ಪಡಿತರ ಅಕ್ಕಿ ದಂಧೆ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯ–ಜಿಲ್ಲಾಧಿಕಾರಿಗೆ ಮನವಿ**

# ಬಡವರ ಅಕ್ಕಿ ಕಾಳಸಂತೆಗೆ : ಕರವೇ ಆಕ್ರೋಶ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಹಾಗೂ ಗದಗ–ಬೆಟಗೇರಿ ಅವಳಿ ನಗರದಲ್ಲಿ ಬಡವರ ಪಾಲಿನ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ದಂಧೆ ವಿರುದ್ಧ ತುರ್ತು ಹಾಗೂ ಕಠಿಣ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಗದಗ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಸ್ವಾಭಿಮಾನಿ ಸೇನೆ ಗದಗ ಜಿಲ್ಲಾಧ್ಯಕ್ಷ ಶರಣು ಎಸ್. ಗೋಡಿ ಅವರು, ಸರ್ಕಾರ ಬಡಜನರ ಹಸಿವು ನೀಗಿಸಲು ಉಚಿತವಾಗಿ ನೀಡುತ್ತಿರುವ ಪಡಿತರ ಅಕ್ಕಿಯನ್ನು ಕೆಲ ಅಕ್ರಮ ದಂಧೆಕೋರರು ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಮನೆ ಮನೆಗೆ ತೆರಳಿ ಅತಿ ಕಡಿಮೆ ದರಕ್ಕೆ ಖರೀದಿ ಮಾಡಿ, ಬಳಿಕ ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಅಲ್ಲದೆ, ಅಕ್ರಮವಾಗಿ ಸಂಗ್ರಹಿಸಲಾದ ಪಡಿತರ ಅಕ್ಕಿಯನ್ನು 6, 12, 14 ಹಾಗೂ 16 ಚಕ್ರದ ಲಾರಿಗಳ ಮೂಲಕ ಹಾವೇರಿ, ಹುಬ್ಬಳ್ಳಿ, ಮಂಡ್ಯ, ಮಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳು ಹಾಗೂ ಮಹಾರಾಷ್ಟ್ರ ಮತ್ತು ಗುಜರಾತ್ ರಾಜ್ಯಗಳಿಗೆ ಸಾಗಾಟ ಮಾಡಲಾಗುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ಹಲವಾರು ವರ್ಷಗಳಿಂದ ನಡೆಯುತ್ತಿರುವ ಈ ಅಕ್ರಮ ದಂಧೆಯನ್ನು ತಡೆಯುವಲ್ಲಿ ಆಹಾರ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ವಿಫಲರಾಗಿದ್ದಾರೆ. ಕೆಲ ಅಧಿಕಾರಿಗಳು ದಂಧೆಕೋರರೊಂದಿಗೆ ಶಾಮೀಲಾಗಿದ್ದಾರೆ ಎಂಬ ಸಾರ್ವಜನಿಕ ಆರೋಪಗಳು ಕೇಳಿ ಬರುತ್ತಿದ್ದು, ಈ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಕರವೇ ಸ್ವಾಭಿಮಾನಿ ಸೇನೆ ವತಿಯಿಂದ ಜಿಲ್ಲಾಡಳಿತಕ್ಕೆ ಸಲ್ಲಿಸಿದ ಮನವಿಯಲ್ಲಿ ಅಕ್ರಮ ಪಡಿತರ ಅಕ್ಕಿ ಸಂಗ್ರಹ ಹಾಗೂ ಸಾಗಾಟದ ವಿರುದ್ಧ ವಿಶೇಷ ದಾಳಿ ನಡೆಸಬೇಕು, ದಂಧೆಕೋರರನ್ನು ಬಂಧಿಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು, ಸಂಬಂಧಪಟ್ಟ ಅಧಿಕಾರಿಗಳ ಪಾತ್ರದ ಕುರಿತು ತನಿಖೆ ನಡೆಸಬೇಕು, ಜಿಲ್ಲೆಯಾದ್ಯಂತ ತಪಾಸಣಾ ಕೇಂದ್ರಗಳು ಹಾಗೂ ವಿಶೇಷ ನಿಗಾ ವ್ಯವಸ್ಥೆ ಜಾರಿಗೊಳಿಸಬೇಕು, ಬಡವರ ಪಾಲಿನ ಪಡಿತರ ಅಕ್ಕಿ ಕಾಳಸಂತೆಗೆ ಹೋಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಯಿತು.

ತಕ್ಷಣ ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ಗದಗ ತಾಲೂಕು ಹಾಗೂ ಗದಗ–ಬೆಟಗೇರಿ ಅವಳಿ ನಗರದಲ್ಲಿ ಉಗ್ರ ಹೋರಾಟ, ಪ್ರತಿಭಟನೆ ಹಾಗೂ ಸಾರ್ವಜನಿಕ ಜಾಗೃತಿ ಚಳವಳಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ವಡವಿ, ಜಿಲ್ಲಾ ರೈತ ಘಟಕದ ಅಧ್ಯಕ್ಷ ಮುತ್ತಣ್ಣ ಮುಂಡವಾಡ, ಜಿಲ್ಲಾ ಕಾರ್ಯದರ್ಶಿಗಳಾದ ಅಶ್ಫಾಕ್ ಬಾಗೋಡಿ ಹಾಗೂ ಲತೀಫ್ ಶಿರಹಟ್ಟಿ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಪವನ್ ಕುಮಾರ್ ಕರಿನಾಯಕರ, ಶಿರಹಟ್ಟಿ ತಾಲೂಕು ಅಧ್ಯಕ್ಷ ವಿರೇಶ ಪಸಾರದ, ಲಕ್ಷ್ಮೇಶ್ವರ ತಾಲೂಕು ಅಧ್ಯಕ್ಷ ನಾಗೇಶ ಅಮರಾಪುರ, ನರಗುಂದ ತಾಲೂಕು ಅಧ್ಯಕ್ಷ ವಿನಾಯಕ ಚತ್ರಬಾವಿ, ಗದಗ–ಬೆಟಗೇರಿ ಅಧ್ಯಕ್ಷ ಇಸ್ಮಾಯಿಲ್ ಉಮಚಗಿ, ಮಾತೇಂಶ ಮಣಕವಾಡ, ಪ್ರವೀಣ ಆಚಾರಿ, ದೇವೇಂದ್ರ ಶಿಂದೆ, ಕೈಸರ್ ಮೊಹಮ್ಮದಅಲಿ, ಸೋಹೈಲ್ ನದಾಫ್, ಮಹಾಂತೇಶ ಉಮಚಗಿ, ಹಜರತ್ ಮನಿಯಾರ, ಇಮ್ರಾನ್ ಭಾವಿಕಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.




> “ಬಡವರ ಹೊಟ್ಟೆ ತುಂಬಬೇಕಾದ ಪಡಿತರ ಅಕ್ಕಿ ಕಾಳಸಂತೆಗೆ ಹೋಗುತ್ತಿರುವುದು ಅತ್ಯಂತ ಗಂಭೀರ ವಿಚಾರ. ಅಕ್ರಮ ದಂಧೆ ನಡೆಸುವವರ ವಿರುದ್ಧ ಜಿಲ್ಲಾಡಳಿತ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು.”
>
> **– ಶರಣು ಎಸ್. ಗೋಡಿ,** ಜಿಲ್ಲಾಧ್ಯಕ್ಷರು, ಕರವೇ ಸ್ವಾಭಿಮಾನಿ ಸೇನೆ

**ಸಮಾನತೆ, ಸಹಿಷ್ಣುತೆ ಮತ್ತು ಮಾನವೀಯ ಮೌಲ್ಯಗಳ ಅರಿವು ಮೂಡಿಸಿದ ಸಂತರು : ಕೆ.ಎಂ. ಶಿರೂರ**

# ಭಕ್ತಿ ಚಳವಳಿಯ ಸಂದೇಶಗಳು ಇಂದಿಗೂ ಪ್ರಸ್ತುತ

■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಭಕ್ತಿ ಪಂಥದ ಸಂತರು, ಶರಣರು ಹಾಗೂ ದಾಸರು ಮಾನವೀಯ ಮೌಲ್ಯಗಳು, ಸಮಾನತೆ, ಸಹಿಷ್ಣುತೆ ಮತ್ತು ಭಕ್ತಿಯ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿದ ಮಹಾನ್ ದಾರ್ಶನಿಕರಾಗಿದ್ದು, ಭಕ್ತಿ ಚಳವಳಿಯು ಅಂಧಶ್ರದ್ಧೆ, ಜಾತಿಭೇದ ಮತ್ತು ಅಸಮಾನತೆ ವಿರುದ್ಧ ಧ್ವನಿಯೆತ್ತಿದ ಮಹತ್ವದ ಸಾಮಾಜಿಕ ಚಳವಳಿಯಾಗಿದೆ ಎಂದು ಮುಳಗುಂದದ ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇತಿಹಾಸ ಉಪನ್ಯಾಸಕ ಕೆ.ಎಂ. ಶಿರೂರ ಅಭಿಪ್ರಾಯಪಟ್ಟರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇತಿಹಾಸ ವಿಭಾಗವು ಐಕ್ಯುಎಸಿ ಅಡಿಯಲ್ಲಿ ಆಯೋಜಿಸಿದ್ದ ‘ಭಕ್ತಿ ಪಂಥದ ದಾರ್ಶನಿಕರು : ಜೀವನ ಮತ್ತು ಬೋಧನೆಗಳು’ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದರು.

ಬಸವಣ್ಣನವರ ಕಾಯಕ, ದಾಸೋಹ ಮತ್ತು ಸಮಾನತೆ, ಅಕ್ಕಮಹಾದೇವಿಯ ವೈರಾಗ್ಯ, ಅಲ್ಲಮಪ್ರಭುವಿನ ಆಧ್ಯಾತ್ಮಿಕತೆ, ಪುರಂದರದಾಸರ ಭಕ್ತಿ, ಕನಕದಾಸರ ಮಾನವೀಯತೆ, ಸಂತ ಕಬೀರರ ಜಾತಿ–ಮತ ವಿರೋಧ, ಗುರು ನಾನಕರ ಮಾನವ ಸೇವೆ, ಮೀರಾಬಾಯಿಯ ಕೃಷ್ಣಭಕ್ತಿ, ತುಳಸಿದಾಸರ ಸತ್ಯಮಾರ್ಗ, ಚೈತನ್ಯ ಮಹಾಪ್ರಭುವಿನ ಕೃಷ್ಣಭಕ್ತಿ, ತುಕಾರಾಮರ ನೈತಿಕ ಬದುಕು, ನಾಮದೇವರ ಸಮಾನತೆ, ರಾಮಾನುಜಾಚಾರ್ಯರ ಭಕ್ತಿಮಾರ್ಗ, ಮಧ್ವಾಚಾರ್ಯರ ವಿಷ್ಣುಭಕ್ತಿ ಹಾಗೂ ವಲ್ಲಭಾಚಾರ್ಯರ ಪುಷ್ಟಿಮಾರ್ಗದ ಸಂದೇಶಗಳು ಸಮಾಜದಲ್ಲಿ ಧಾರ್ಮಿಕ ಸಹಿಷ್ಣುತೆ, ನೈತಿಕತೆ ಮತ್ತು ಮಾನವೀಯ ಮೌಲ್ಯಗಳನ್ನು ಬಲಪಡಿಸುವ ಸಾರ್ವಕಾಲಿಕ ಚಿಂತನೆಗಳಾಗಿವೆ ಎಂದು ಹೇಳಿದರು.

ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತದಲ್ಲಿ ವಿವಿಧ ಕಾಲಘಟ್ಟಗಳಲ್ಲಿ ಭಕ್ತಿ ಚಳವಳಿ ಬೆಳವಣಿಗೆಯಾಗಿದ್ದು, ಈ ಚಳವಳಿಯ ದಾರ್ಶನಿಕರು ಭಕ್ತಿ, ಸಮಾನತೆ, ಮಾನವತೆ ಮತ್ತು ಸಾಮಾಜಿಕ ಸುಧಾರಣೆಯ ಸಂದೇಶ ಸಾರಿದ ಮಹಾನ್ ಚಿಂತಕರಾಗಿದ್ದಾರೆ ಎಂದರು.

ಐಕ್ಯುಎಸಿ ಸಂಯೋಜಕ ಡಾ. ಜಿತೇಂದ್ರ ಜಾಗೀರದಾರ ಮಾತನಾಡಿ, ನಿಜವಾದ ಇತಿಹಾಸವನ್ನು ಮರೆತ ಸಮಾಜವೇ ಕಲುಷಿತವಾಗುತ್ತಿದ್ದು, ವಸ್ತುನಿಷ್ಠ ಇತಿಹಾಸ ಅಧ್ಯಯನದಿಂದ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಲು ಸಾಧ್ಯ ಎಂದರು.

ಇತಿಹಾಸ ವಿಭಾಗದ ಉಪನ್ಯಾಸಕ ಬಸವಂತಪ್ಪ ದೊಡ್ಡಮನಿ ಸ್ವಾಗತಿಸಿದರು. ಸಹಾಯಕ ಪ್ರಾಧ್ಯಾಪಕಿ ಹಾಗೂ ಕಾರ್ಯಕ್ರಮದ ಸಂಯೋಜಕಿ ರೋಹಿಣಿ ರಾಚಣ್ಣವರ ವಂದಿಸಿದರು. ಇತಿಹಾಸ ವಿಭಾಗದ ವಿದ್ಯಾರ್ಥಿಗಳು ಕಾರ್ಯಕ್ರಮ ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸಂಪನ್ಮೂಲ ವ್ಯಕ್ತಿ ಕೆ.ಎಂ. ಶಿರೂರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.




> “ಭಕ್ತಿ ಪಂಥದ ದಾರ್ಶನಿಕರ ಸಂದೇಶಗಳು ಕೇವಲ ಧಾರ್ಮಿಕ ಭಕ್ತಿಗೆ ಸೀಮಿತವಲ್ಲ; ಅವು ಮಾನವೀಯತೆ, ಸಮಾನತೆ ಮತ್ತು ಸೌಹಾರ್ದತೆಯ ಬದುಕಿಗೆ ದಾರಿದೀಪವಾಗಿವೆ.”
>
> **– ಪ್ರೊ. ಸುಧಾ ಕೌಜಗೇರಿ, ಪ್ರಾಚಾರ್ಯೆ**

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ವತಿಯಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90 ಹಾಗೂ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ವೀರಶೈವ ಲಿಂಗಾಯತ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ.

ಅಭ್ಯರ್ಥಿಗಳು ಮಹಾಸಭೆಯ ಅಧಿಕೃತ ಜಾಲತಾಣದಲ್ಲಿ ಮೇ 25ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು. ಅಂಚೆ, ಕೊರಿಯರ್ ಅಥವಾ ಖುದ್ದಾಗಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಮಹಾಸಭೆ ಸ್ಪಷ್ಟಪಡಿಸಿದೆ.

ಗದಗ ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರದ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮನವಿ ಮಾಡಿದ್ದಾರೆ.

**ಸಾಮರಸ್ಯ ಮತ್ತು ಮಾನವೀಯ ಮೌಲ್ಯಗಳ ಉಳಿವಿಗೆ ಮಠಗಳು ಕಾರ್ಯನಿರ್ವಹಿಸಬೇಕು : ಶ್ರೀ ರಂಭಾಪುರಿ ಜಗದ್ಗುರುಗಳು**

# ಒಡೆದ ಮನಸ್ಸುಗಳನ್ನು ಬೆಸೆಯುವುದೇ ಧರ್ಮದ ಗುರಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ಎಲ್ಲ ರಂಗಗಳಲ್ಲಿ ಹೆಚ್ಚುತ್ತಿರುವ ಸಂಘರ್ಷ ನಿಂತು ಶಾಂತಿ ಹಾಗೂ ಸಾಮರಸ್ಯ ಮೂಡಿಸುವ ಕೆಲಸ ಮಠಗಳಿಂದ ನಡೆಯಬೇಕು. ಒಡೆದ ಮನಸ್ಸುಗಳನ್ನು ಬೆಸೆಯುವುದೇ ನಿಜವಾದ ಧರ್ಮದ ಗುರಿಯಾಗಿದೆ ಎಂದು ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಅವರು ಬುಧವಾರ ನವಲಗುಂದ ಪಂಚಗೃಹ ಹಿರೇಮಠದಲ್ಲಿ ನಡೆದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಭಾರತ ಧರ್ಮ, ಸಂಸ್ಕೃತಿ ಮತ್ತು ತತ್ವಸಿದ್ಧಾಂತಗಳ ತಾಯ್ನಾಡಾಗಿದ್ದು, ವಿಪತ್ತಿನ ಕಾಲದಲ್ಲೂ ಧರ್ಮ ಬಿಡದವನೇ ನಿಜವಾದ ಧರ್ಮಾತ್ಮ ಎಂದರು. ಗಾಢ ಅಜ್ಞಾನದಲ್ಲಿ ಮುಳುಗಿದ ಜನರಲ್ಲಿ ಜಾಗೃತಿ ಮೂಡಿಸುವುದೇ ಧಾರ್ಮಿಕ ಕೇಂದ್ರಗಳ ಮುಖ್ಯ ಗುರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನವಲಗುಂದ ಪಂಚಗೃಹ ಹಿರೇಮಠದ ನೂತನ ಶ್ರೀಗಳಾಗಿ ಇಮ್ಮಡಿ ಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಗುರುತ್ವಾಧಿಕಾರ



ಸ್ವೀಕರಿಸಿದರು. ಅವರಿಗೆ ರೇಶ್ಮೆ ಮಡಿ, ಫಲ-ಪುಷ್ಪ ನೀಡಿ ಆಶೀರ್ವದಿಸಲಾಯಿತು. ಹಿರಿಯ ಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳ ಧರ್ಮನಿಷ್ಠ ಕಾರ್ಯವನ್ನೂ ಜಗದ್ಗುರುಗಳು ಶ್ಲಾಘಿಸಿದರು.

ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಮಾತನಾಡಿ, ಮಠಗಳು ಸತ್ಯ, ಶಾಂತಿ, ಸಾಮರಸ್ಯ ಮತ್ತು ಸೌಹಾರ್ದತೆ ಬೆಳೆಸುವ ಕಾರ್ಯ ಮಾಡುತ್ತಿವೆ ಎಂದರು.

ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಜಗದ್ಗುರುಗಳು ಮಾತನಾಡಿ, ಮರೆತು ಹೋದ ಮೌಲ್ಯಗಳನ್ನು ನೆನಪಿಸುವುದೇ ಮಠಗಳ ಕೆಲಸ ಎಂದು ಹೇಳಿದರು.

ಡಾ. ಚಂದ್ರಶೇಖರ ಜಗದ್ಗುರುಗಳು ಮಾತನಾಡಿ, ಅಜ್ಞಾನ ದೂರ ಮಾಡಿ ಅರಿವಿನ ಕಣ್ಣು ತೆರೆಸಲು ಗುರುವಿನ ಮಾರ್ಗದರ್ಶನ ಅಗತ್ಯ ಎಂದರು.

ಡಾ. ವಿಶ್ವಾರಾಧ್ಯ ಮಲ್ಲಿಕಾರ್ಜುನ ಜಗದ್ಗುರುಗಳು ಮಾತನಾಡಿ, ಹೊರಗಿನ

> "ಸಮಾಜದಲ್ಲಿ ಹೆಚ್ಚುತ್ತಿರುವ ಅಸಹನೆ ಮತ್ತು ಸಂಘರ್ಷ ಕಡಿಮೆಯಾಗಬೇಕಾದರೆ ಧರ್ಮ ಮಾನವೀಯ ಮೌಲ್ಯಗಳ ದಾರಿಯಲ್ಲಿ ಸಾಗಬೇಕು."
>
> **- ಡಾ. ವೀರಸೋಮೇಶ್ವರ** ಜಗದ್ಗುರುಗಳು, ಶ್ರೀ ರಂಭಾಪುರಿ ಪೀಠ

ಸಂಪತ್ತಿಗಿಂತ ಆಧ್ಯಾತ್ಮಿಕ ಸಂಪತ್ತು ದೊಡ್ಡದು ಎಂದು ಹೇಳಿದರು.

ನೂತನ ಇಮ್ಮಡಿ ಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಧರ್ಮ ಪರಂಪರೆ ಹಾಗೂ ಮಠದ ಮೌಲ್ಯಗಳನ್ನು ಉಳಿಸಿಕೊಂಡು ಭಕ್ತರಿಗೆ ಮಾರ್ಗದರ್ಶನ ನೀಡುವ ಸಂಕಲ್ಪ ವ್ಯಕ್ತಪಡಿಸಿದರು.

ಶಾಸಕ ಎನ್.ಎಚ್. ಕೋನರೆಡ್ಡಿ ಮಾತನಾಡಿ, ಮಠಗಳು ಸಮಾಜದಲ್ಲಿ ಸಾಮರಸ್ಯ ಮತ್ತು ಸದ್ಭಾವನೆ ಬೆಳೆಸುವ ಕಾರ್ಯ ಮಾಡಬೇಕು ಎಂದರು.

ಸಮಾರಂಭದಲ್ಲಿ ವಿವಿಧ ಮಠಗಳ ಶ್ರೀಗಳು ಹಾಗೂ ಭಕ್ತರು ಪಾಲ್ಗೊಂಡಿದ್ದರು.

**ನಿಸ್ವಾರ್ಥ ಸೇವೆಯಿಂದ ಜನರ ಜೀವ ಉಳಿಸುವ ಕಾರ್ಯ ಶ್ಲಾಘನೀಯ -ಡಾ. ಶ್ರೀಕಾಂತ ಕಾಟೇವಾಲ**

# ಆರೋಗ್ಯ ವ್ಯವಸ್ಥೆಯ ಬೆನ್ನೆಲುಬು ದಾದಿಯರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ದಾದಿಯರು ಆರೋಗ್ಯ ವ್ಯವಸ್ಥೆಯ ಬೆನ್ನೆಲುಬಾಗಿದ್ದು, ಅವರ ನಿಸ್ವಾರ್ಥ ಸೇವೆಗೆ ವಿಶ್ವ ದಾದಿಯರ ದಿನಾಚರಣೆ ಮೂಲಕ ಗೌರವ ಸಲ್ಲಿಸಲಾಗುತ್ತಿದೆ ಎಂದು ಲಕ್ಷ್ಮೇಶ್ವರ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲ ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಶ್ವ ದಾದಿಯರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆಸ್ಪತ್ರೆಯ ದಾದಿಯರನ್ನು ಗೌರವಿಸಿ ಮಾತನಾಡಿದರು.

ಪ್ರಪಂಚದಾದ್ಯಂತ ಕಾಯಿಲೆಯಿಂದ ಬಳಲುತ್ತಿರುವ ಜನರ ಉಪಚಾರ, ಆರೈಕೆ ಹಾಗೂ ಯೋಗಕ್ಷೇಮದಲ್ಲಿ ನರ್ಸ್‌ಗಳ ಪಾತ್ರ ಅಪಾರವಾಗಿದೆ. ವೈದ್ಯರು ಮಾತ್ರವಲ್ಲ, ದಾದಿಯರೂ ಜನರ ಪಾಲಿಗೆ ದೇವರಂತಿದ್ದು, ಜೀವ ರಕ್ಷಣೆಗಾಗಿ ಹಗಲಿರುಳೆನ್ನದೆ ಸೇವೆ



ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸೇವೆ ಸಲ್ಲಿಸುತ್ತಿರುವ ದಾದಿಯರು, ಸಿಬ್ಬಂದಿ ಹಾಗೂ ವೈದ್ಯರು ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಿರುವ ಕಾರಣ ಆಸ್ಪತ್ರೆಗೆ ಜನದಟ್ಟಣೆ ಹೆಚ್ಚುತ್ತಿದೆ. ದಾದಿಯರ ಸೇವೆಯನ್ನು ಸಮಾಜ ಸ್ಮರಿಸಿ ಅವರಿಗೆ ಗೌರವ ಸಲ್ಲಿಸುವ ಕಾರ್ಯ ನಡೆಯಬೇಕು ಎಂದರು.

ಪ್ರತಿ ವರ್ಷ ಮೇ 12ರಂದು ಆಧುನಿಕ ನರ್ಸಿಂಗ್ ಪದ್ಧತಿಯ ಸಂಸ್ಥಾಪಕಿ ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮದಿನದ ಅಂಗವಾಗಿ ಅಂತಾರಾಷ್ಟ್ರೀಯ ದಾದಿಯರ ದಿನಾಚರಣೆ ಆಚರಿಸಲಾಗುತ್ತದೆ. ಅವರ ಹೆಸರಿನ ಪ್ರತಿಷ್ಠಿತ 'ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ' ಪಟ್ಟಣದಲ್ಲಿ ಸೇವೆ ಸಲ್ಲಿಸಿದ್ದ ದಾದಿ ಶಕುಂತಲಾ ಅವರಿಗೆ ಲಭಿಸಿರುವುದು ಹೆಮ್ಮೆಯ ಸಂಗತಿ ಎಂದರು.

ಪತ್ರಕರ್ತ ಅಶೋಕ ಸೊರಟೂರ ಮಾತನಾಡಿ, ವೈದ್ಯರಿಗಿಂತ ಮೊದಲು ರೋಗಿಗಳ ಆರೈಕೆ ಮಾಡುವವರು ದಾದಿಯರು. ಕೊರೋನಾ ಸಂದರ್ಭದಲ್ಲಿ ತಮ್ಮ ಜೀವದ ಹಂಗನ್ನೇ ತೊರೆದು ಜನರ ಸೇವೆ ಮಾಡಿದ ದಾದಿಯರ ಸೇವೆ ಮರೆಯಲಾಗದು. ಸೇವೆಯೇ ಪರಮಧರ್ಮ ಎಂಬ ತತ್ವದಡಿ ಅವರು ಸಲ್ಲಿಸುತ್ತಿರುವ ಸೇವೆ ಆರೋಗ್ಯ ವ್ಯವಸ್ಥೆಯ ಬಲವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಡಾ. ಪ್ರವೀಣ ಸಜ್ಜನ, ಡಾ. ಬಿಸ್ಮಿಲ್ಲಾ, ಸುನೀಲ ಚವ್ಹಾಣ, ವಿಜಯಕುಮಾರ ಮಾಂಡ್ರೆ, ಸುನೀತಾ ನಂದೆಣ್ಣವರ, ಲಕ್ಷ್ಮೀ ಜನಿವಾರದ, ಶ್ರೀಶೈಲ ಫಕ್ಕೀರಶೆಟ್ಟಿ, ಲಕ್ಷ್ಮೀ ಡೊಳ್ಳಿನ್, ಸುವರ್ಣ ಹವಾಲ್ದಾರ, ಆಶಾ ಭಂಡಾರಿಮಠ, ರತ್ನಾ ದಂಡಿನ, ಶಕೀಲಾಬಾನು ಎಂ., ಬಸವರಾಜ ಕರ್ಕಿಕಟ್ಟಿ, ಸಹಾಯಕಿ ಪಾರ್ವತಿ ಲಮಾಣಿ, ಪತ್ರಕರ್ತರಾದ ದಿಗಂಬರ ಪೂಜಾರ, ನಾಗರಾಜ ಹಣಗಿ, ಶಿವಲಿಂಗಯ್ಯ ಹೊತಗಿಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> "ರೋಗಿಗಳ ನೋವಿಗೆ ಸ್ಪಂದಿಸಿ ಹಗಲಿರುಳೆನ್ನದೆ ಸೇವೆ ಸಲ್ಲಿಸುವ ದಾದಿಯರ ಸೇವೆ ಸಮಾಜ ಎಂದಿಗೂ ಮರೆಯಬಾರದು."
>
> **- ಡಾ. ಶ್ರೀಕಾಂತ ಕಾಟೇವಾಲ,** ಆಡಳಿತ ವೈದ್ಯಾಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ, ಲಕ್ಷ್ಮೇಶ್ವರ

**ಶಿಕ್ಷಣ ಮತ್ತು ಸಮಾನತೆಯ ಸಂದೇಶ ಇಂದಿಗೂ ಪ್ರಸ್ತುತ: ರಾಮಕೃಷ್ಣ ದೊಡ್ಡಮನಿ**

# ಅಂಬೇಡ್ಕರ್ ಆದರ್ಶಗಳು ನವಭಾರತಕ್ಕೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ವರಿಗೂ ಸಮಬಾಳು ಎಂಬ ತತ್ವದಡಿ ದೇಶದ ಎಲ್ಲ ವರ್ಗ, ಜಾತಿ ಹಾಗೂ ಧರ್ಮಗಳ ಜನರಿಗೆ ಸಮಾನ ನ್ಯಾಯ ಕಲ್ಪಿಸಿದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್‌ರಾಮ್ ಅವರ ತತ್ವ, ಚಿಂತನೆ ಮತ್ತು ಆದರ್ಶಗಳನ್ನು ಅಳವಡಿಸಿಕೊಂಡು ನವಭಾರತ ನಿರ್ಮಾಣಕ್ಕೆ ಬದ್ಧರಾಗಬೇಕಾಗಿದೆ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಅವರು ಸೋಮವಾರ ಶಿಗ್ಲಿ ಗ್ರಾಮದಲ್ಲಿ ಮಾದಿಗ ಮಹಾಸಭಾ ಶಿಗ್ಲಿ ಗ್ರಾಮ ಘಟಕದಿಂದ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್‌ರಾಮ್ ಜಯಂತ್ಯುತ್ಸವದ ಅಂಗವಾಗಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶತಮಾನಗಳಿಂದ ಶೋಷಣೆಗೆ ಒಳಗಾದವರಿಗೆ ಶಿಕ್ಷಣವೆಂಬ ಶಕ್ತಿ ನೀಡಿ, ಸಮಾನ ಅವಕಾಶ ಕಲ್ಪಿಸುವ ಮೂಲಕ ಸಾಮಾಜಿಕ ಬದಲಾವಣೆಯ ಹರಿಕಾರರಾಗಿದ್ದಾರೆ. ವಿಶ್ವಶ್ರೇಷ್ಠ ಸಂವಿಧಾನವನ್ನು ದೇಶಕ್ಕೆ ನೀಡಿ ಪ್ರತಿಯೊಬ್ಬ ಪ್ರಜೆಗೂ ಸಮಾನ ಹಕ್ಕು ಮತ್ತು ನ್ಯಾಯ ದೊರಕುವಂತೆ ಮಾಡಿದ್ದಾರೆ. ಎಲ್ಲರೂ ಸ್ವಾತಂತ್ರ್ಯ



> "ಶಿಕ್ಷಣವೆಂಬ ಶಕ್ತಿಯಿಂದ ಶೋಷಿತ ಸಮುದಾಯಗಳಿಗೆ ಆತ್ಮವಿಶ್ವಾಸ ತುಂಬಿ, ಸಮಾನ ಹಕ್ಕಿನ ಬದುಕಿಗೆ ಅಂಬೇಡ್ಕರ್ ದಾರಿದೀಪವಾಗಿದ್ದಾರೆ."
>
> **- ರಾಮಕೃಷ್ಣ ದೊಡ್ಡಮನಿ,** ಮಾಜಿ ಶಾಸಕ

ಹಾಗೂ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಅಂಬೇಡ್ಕರ್ ಅವರ ಕೊಡುಗೆ ಮೂಲಾಧಾರವಾಗಿದೆ ಎಂದು ಹೇಳಿದರು.

ಫಕ್ಕಿರೇಶ ಮ್ಯಾಟಣ್ಣವರ ಮಾತನಾಡಿ, ಸಮಾಜದಲ್ಲಿ ಶೈಕ್ಷಣಿಕ, ಧಾರ್ಮಿಕ ಹಾಗೂ ರಾಜಕೀಯ ಸ್ಥಾನಮಾನಗಳನ್ನು ಕಲ್ಪಿಸಿದ ಅಂಬೇಡ್ಕರ್ ಅವರ ತತ್ವ-ಸಿದ್ಧಾಂತಗಳು ಸಮಾಜಕ್ಕೆ ದಾರಿದೀಪವಾಗಿವೆ. ಸಮಾಜದ ಬಾಂಧವರು ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ನೀಡುವತ್ತ ಗಮನಹರಿಸಬೇಕು ಎಂದರು.

ಕೆಪಿಸಿಸಿ ಸದಸ್ಯೆ ಸುಜಾತಾ ದೊಡ್ಡಮನಿ ಮಾತನಾಡಿ, ಸಮ ಸಮಾಜದ ಹಿತಕ್ಕಾಗಿ ಅಂಬೇಡ್ಕರ್ ಹಾಗೂ ಜಗಜೀವನ್‌ರಾಮ್ ಮಾಡಿದ ತ್ಯಾಗವನ್ನು ಸ್ಮರಿಸಿ, ಅವರ ಆದರ್ಶಗಳನ್ನು ಪಾಲಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಡಿವೈಎಸ್‌ಪಿ ಎಸ್.ಎಂ. ರಾಗಿ, ಪಿಎಸ್‌ಐ ನಾಗರಾಜ ಗಡಾದ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಡಿ.ವೈ. ಹುನಗುಂದ, ಯಲ್ಲಪ್ಪ ತಳವಾರ, ಮುತ್ತು ಯಲವಗಿ, ಮುದಕಪ್ಪ ಗದಾಡ, ಬಸಣ್ಣ ಕರ್ಜಗಿ, ರಂಜನಗೌಡ ಪಾಟೀಲ, ಪ್ರವೀಣ ಹುಲಗೂರ, ರಾಮಣ್ಣ ಲಮಾಣಿ, ಅಶೋಕ ಶಿರಹಟ್ಟಿ, ಎನ್.ಡಿ. ಮೇಗಿಲಮನಿ, ಶಿವಾನಂದ ತಳಗೇರಿ, ಆನಂದ ಕರ್ಜಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ದೇವೇಂದ್ರಪ್ಪ ಸುಂಕಮ್ಮನವರ ಕಾರ್ಯಕ್ರಮ ನಿರೂಪಿಸಿದರು.

**ಮಾನವೀಯ ಮೌಲ್ಯ ಉಳಿದಾಗ ಮಾತ್ರ ಸಮಾಜದಲ್ಲಿ ಸುಖ-ಶಾಂತಿ ಸಾಧ್ಯ : ಶ್ರೀ ರಂಭಾಪುರಿ ಜಗದ್ಗುರುಗಳು**

# ಧರ್ಮ-ಸಂಸ್ಕಾರಗಳಿಂದ ಬದುಕು ಸಾರ್ಥಕ

■ವಿಜಯಸಾಕ್ಷಿ ಸುದ್ದಿ, ನವಲಗುಂದ

ಭಾರತೀಯ ಪುಣ್ಯಭೂಮಿಯಲ್ಲಿ ಅನೇಕ ಧರ್ಮಗಳು ಮತ್ತು ಆಚರಣೆಗಳು ಬೆಳೆದು ಸಮಾಜದ ಮೇಲೆ ಅಪಾರ ಪ್ರಭಾವ ಬೀರಿವೆ. ಈ ನಾಡಿನ ಜನರು ಸಂಸ್ಕೃತಿಯ ಪಾವಿತ್ರ್ಯವನ್ನು ಕಾಪಾಡಿಕೊಳ್ಳುವ ಅಗತ್ಯವಿದ್ದು, ಮೌಲ್ಯಗಳ ಅಳಿವು-ಉಳಿವು ಮಾನವನ ಆಚರಣೆಯಲ್ಲಿದೆ ಎಂದು ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ನವಲಗುಂದದ ಪಂಚಗೃಹ ಹಿರೇಮಠದಲ್ಲಿ ನಡೆದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮೌಲ್ಯಗಳ ಸಂರಕ್ಷಣೆಯೇ ಧರ್ಮಪೀಠಗಳ ಮೂಲ ಗುರಿಯಾಗಿದೆ. ನೀತಿವಂತರು ನಿರಾಶರಾಗಬಾರದು. ನೋವು ನುಂಗಿ ನಲಿವನ್ನು ತೋರಬೇಕಾಗಿದೆ. ಬಹಳಷ್ಟು ಜನರಿಗೆ ಕರ್ತವ್ಯಪ್ರಜ್ಞೆಯ ಕೊರತೆ ಇದೆ. ನೀತಿ ಸಂಹಿತೆ ಅರಿತವನಿಗೆ ನೆಮ್ಮದಿಯ ಫಲ ದೊರೆಯುತ್ತದೆ. ಸತ್ಯ ಮತ್ತು ಶುದ್ಧ ಧರ್ಮಮಾರ್ಗದಲ್ಲಿ ನಡೆಯುವ ಮೂಲಕ ಮನುಷ್ಯ ಸುಖ-ಶಾಂತಿ



ಪಡೆಯಬೇಕು ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಆಶೀರ್ವಚನ ನೀಡಿ, ಅಸಹನೆ, ಅಸಮಾಧಾನ ಮತ್ತು ಅತೃಪ್ತಿಯಿಂದ ಬಳಲುತ್ತಿರುವ ಮನುಷ್ಯನಿಗೆ ಧರ್ಮದ ಅರಿವು ಬದುಕಿನ ದಾರಿ ತೋರಿಸುತ್ತದೆ. ಒಳ್ಳೆಯವರ ಒಡನಾಟ ಜೀವನ ವಿಕಾಸಗೊಳಿಸುತ್ತದೆ. ದೇವರು, ಧರ್ಮ ಮತ್ತು ಗುರುವಿನ ಮೇಲೆ ನಂಬಿಕೆ-ವಿಶ್ವಾಸ ಇಟ್ಟು ಬದುಕುವ ಅಗತ್ಯವಿದೆ ಎಂದು ಹೇಳಿದರು.

ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಜಗದ್ಗುರುಗಳು ಮಾತನಾಡಿ, ಹುಟ್ಟು-ಸಾವು ಯಾರನ್ನೂ ಬಿಡುವುದಿಲ್ಲ. ಆದರೆ ಆ ಎರಡು ನಡುವಿನ ಬದುಕನ್ನು ಶ್ರೀಮಂತಗೊಳಿಸಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ. ದೊಡ್ಡ ಮನಸ್ಸು ಮತ್ತು ದೊಡ್ಡ ಗುಣಗಳಿಂದಲೇ ನಿಜವಾದ ದೊಡ್ಡಸ್ತಿಕೆ ಸಿಗುತ್ತದೆ ಎಂದರು.

ಡಾ. ಚಂದ್ರಶೇಖರ ಜಗದ್ಗುರುಗಳು ಆಶೀರ್ವಚನ ನೀಡಿ, ಶ್ರದ್ಧೆ, ನಿಷ್ಠೆ ಮತ್ತು ಅನುಭಾವದಿಂದ ಬದುಕು ನಿರಾಳವಾಗುತ್ತದೆ. ಸಮರಸವೇ ಸರ್ವ ಸೌಭಾಗ್ಯಕ್ಕೆ ಸೋಪಾನ. ವೀರಶೈವ ಧರ್ಮದ ತತ್ವತ್ರಯಗಳ ಪಾಲನೆಯಿಂದ ಜೀವನ ಪಾವನಗೊಳ್ಳುತ್ತದೆ ಎಂದು ಹೇಳಿದರು.

ಡಾ. ವಿಶ್ವಾರಾಧ್ಯ ಮಲ್ಲಿಕಾರ್ಜುನ ಜಗದ್ಗುರುಗಳು ಮಾತನಾಡಿ, ನೆಮ್ಮದಿಯ ಬದುಕಿಗೆ ಧರ್ಮವೇ ಆಶ್ರಯ. ಧರ್ಮ, ಸಂಸ್ಕೃತಿ, ಸಭ್ಯತೆ, ಸದ್ಗುಣ ಮತ್ತು ಸಂಸ್ಕಾರಗಳೇ ಜನರ ನಿಜವಾದ ಆಸ್ತಿ. ಹೊರಗಿನ ಸಂಪತ್ತು ನಾಶವಾದರೂ ಆಧ್ಯಾತ್ಮಿಕ ಸಂಪತ್ತು ಶಾಶ್ವತವಾಗಿರುತ್ತದೆ ಎಂದರು.

ನವಲಗುಂದ ಕ್ಷೇತ್ರದ ಶಾಸಕ ಎನ್.ಎಚ್. ಕೋನರೆಡ್ಡಿ ಧರ್ಮ ಸಮಾರಂಭ ಉದ್ಘಾಟಿಸಿ ಮಾತನಾಡಿ, ದುಷ್ಟರ ಸಹವಾಸದಿಂದ ದೂರವಿದ್ದು ಭವಬಂಧನ ಪರಿಹರಿಸುವ ಶ್ರೀಗುರುವನ್ನು ಸೇರಿ ಬದುಕಬೇಕು. ಗುರುವಿನಿಂದ ಅಜ್ಞಾನ ದೂರವಾಗಿ ಸುಜ್ಞಾನ ಪ್ರಾಪ್ತವಾಗುತ್ತದೆ ಎಂದು ಹೇಳಿದರು.

ಮಾಜಿ ಶಾಸಕ ಶಂಕರ ಪಾಟೀಲ ಮುನೇನಕೊಪ್ಪ ಮಾತನಾಡಿ, ವೀರಶೈವ ಧರ್ಮದ ಪಂಚಪೀಠಗಳು ಮಾನವಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶ ಸಾರುತ್ತಿವೆ. ಧರ್ಮ ಮತ್ತು ಜಾತಿಗಳ ಮಧ್ಯೆ ನಡೆಯುತ್ತಿರುವ ಸಂಘರ್ಷ ನಿಲ್ಲಲು ಧರ್ಮಪೀಠಗಳ ಮಾರ್ಗದರ್ಶನ ಅಗತ್ಯವಿದೆ ಎಂದರು.

ಸಮಾರಂಭದಲ್ಲಿ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಹಿರೇವಡ್ಡಟ್ಟಿ ವೀರೇಶ್ವರ ಶಿವಾಚಾರ್ಯರು, ನವನಗರದ ರಾಜಶೇಖರ ಶಿವಾಚಾರ್ಯರು, ನರಗುಂದ ಗುರುಸಿದ್ಧವೀರ ಶಿವಯೋಗಿ ಶಿವಾಚಾರ್ಯರು, ಅಡ್ನೂರ ಅಭಿನವ ಪಂಚಾಕ್ಷರ ಶಿವಾಚಾರ್ಯರು, ಕುಂದಗೋಳದ ಬಸವಣ್ಣಜ್ಜನವರು ಕಲ್ಯಾಣಪುರ, ಗುಳೇದಗುಡ್ಡದ ಅಭಿನವ ಒಪ್ಪತ್ತೇಶ್ವರ ಸ್ವಾಮಿಗಳು ಸೇರಿದಂತೆ ಹಲವಾರು ಮಠಾಧೀಶರು ಪಾಲ್ಗೊಂಡಿದ್ದರು.

> "ಸತ್ಯ ಮತ್ತು ಶುದ್ಧ ಧರ್ಮಮಾರ್ಗದಲ್ಲಿ ನಡೆದು ಮಾನವೀಯ ಮೌಲ್ಯಗಳನ್ನು ಉಳಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಸುಖ-ಶಾಂತಿ ನೆಲೆಸಲು ಸಾಧ್ಯ."
>
> **- ಡಾ. ವೀರಸೋಮೇಶ್ವರ** ಜಗದ್ಗುರುಗಳು, ಶ್ರೀ ರಂಭಾಪುರಿ ಪೀಠ

**ಮನರೇಗಾ ಕಾರ್ಮಿಕರ ಆಕ್ರೋಶ -ಬಾಕಿ ಹಣ ಬಿಡುಗಡೆಗೆ ಸರ್ಕಾರಕ್ಕೆ ಒತ್ತಾಯ**

# ಕೈಗೆ ಕೆಲಸ ಇಲ್ಲ...ಮಾಡಿದ ಕೆಲಸಕ್ಕೂ ಕೂಲಿ ಇಲ್ಲ!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಮನರೇಗಾ) ಸಮರ್ಪಕವಾಗಿ ಜಾರಿಗೊಳಿಸಿ, ಬಾಕಿ ಉಳಿದ ಕೂಲಿ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿ ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕಿನ ಬನ್ನಿಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೂಲಿ ಕಾರ್ಮಿಕರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಮನವಿಯಲ್ಲಿ, ರಾಜ್ಯದಲ್ಲಿ ಹಾಗೂ ವಿಜಯನಗರ ಜಿಲ್ಲೆಯಲ್ಲಿ ಮನರೇಗಾ ಯೋಜನೆ ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲ. ಈ ವರ್ಷ ಮತ್ತು ಕಳೆದ ವರ್ಷ ಕ್ರಿಯಾ ಯೋಜನೆಗಳಿಗೆ ಅನುಮೋದನೆ ಸಿಗದೇ ನಿರಂತರ 100 ದಿನಗಳ ಉದ್ಯೋಗ ದೊರಕಿಲ್ಲ ಎಂದು ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸಿದರು.

ಕೆಲಸ ಮಾಡಿದ ಅಲ್ಪಸ್ವಲ್ಪ ಕೂಲಿ ಹಣವೂ ಇನ್ನೂ ಬಿಡುಗಡೆ ಆಗದಿರುವುದರಿಂದ ಗ್ರಾಮೀಣ ಕೂಲಿ ಕಾರ್ಮಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಲಿಯನ್ನೇ ನಂಬಿಕೊಂಡು ಬದುಕುತ್ತಿರುವ ಕುಟುಂಬಗಳಿಗೆ ಜಮೀನಿನಲ್ಲಿ ಬಿತ್ತನೆ ಕಾರ್ಯ ಕೈಗೊಳ್ಳಲು ಹಣವಿಲ್ಲ. ಮಕ್ಕಳ ಶಾಲೆ ಹಾಗೂ ಕಾಲೇಜು ಶುಲ್ಕ ಕಟ್ಟಲು ಸಹ ಪರದಾಡುವಂತಾಗಿದೆ ಎಂದು



> "ಮನರೇಗಾ ಕಾರ್ಮಿಕರಿಗೆ ಕೆಲಸವೂ ಇಲ್ಲ, ಮಾಡಿದ ಕೆಲಸಕ್ಕೆ ಕೂಲಿಯೂ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಬಾಕಿ ಕೂಲಿ ಬಿಡುಗಡೆ ಮಾಡಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು."
>
> **- ಅಕ್ಕಮಹಾದೇವಿ,** ಸಂಚಾಲಕಿ, ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ, ವಿಜಯನಗರ ಜಿಲ್ಲೆ

ದೂರಿದರು.

ಸಾಲ ಮಾಡಿ ಜೀವನ ನಡೆಸೋಣವೆಂದರೂ, ಕೆಲಸದ ಖಾತ್ರಿಯೇ ಇಲ್ಲದಂತಾಗಿದೆ. ಮನರೇಗಾ ಗ್ರಾಮೀಣ ಕುಟುಂಬಗಳ ಹಕ್ಕಿನ ಯೋಜನೆಯಾಗಿದ್ದರೂ, ಎನ್‌ಎಂಎಂಎಸ್, ಇ-ಕೆವೈಸಿ, ಎಬಿಪಿಎಸ್, ಎನ್‌ಪಿಸಿ ಸೇರಿದಂತೆ ಹೊಸ ನಿಯಮಗಳಿಂದ ದಿನಕ್ಕೊಂದು ಸಮಸ್ಯೆ ಎದುರಾಗುತ್ತಿದೆ. ಕೆಲಸಕ್ಕೆ ಹೋದರೂ ಕೂಲಿ ಸಿಗುವ ಖಾತ್ರಿ ಇಲ್ಲದ ಸ್ಥಿತಿ ನಿರ್ಮಾಣವಾಗಿದೆ ಎಂದು ಕಾರ್ಮಿಕರು ಆರೋಪಿಸಿದರು.

ಗ್ರಾಮೀಣ ಭಾಗದಲ್ಲಿ ಕೆರೆ, ಗೋಕಟ್ಟೆ, ನಾಲೆಗಳ ಅಭಿವೃದ್ಧಿ ಹಾಗೂ ಆಸ್ತಿ ಸೃಜನಕ್ಕೆ ಮನರೇಗಾ ಯೋಜನೆ ಸಮರ್ಪಕವಾಗಿ ಜಾರಿಯಾಗಬೇಕು. ಬಿಸಿಲಿನ ತಾಪ ಹೆಚ್ಚಿರುವ ಹೈದರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕೆಲಸದ ಪ್ರಮಾಣವನ್ನು ಶೇ.30ರಷ್ಟು ಕಡಿಮೆ ಮಾಡಿ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿದರು.

ಗ್ರಾಮೀಣ ಕಾರ್ಮಿಕರು ದೇಶದ ದೊಡ್ಡ ಆಸ್ತಿ. ಅವರಿಗೆ ಗೌರವಯುತ ಬದುಕು ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಬನ್ನಿಕಲ್ ಗ್ರಾಮದ ಕಾರ್ಮಿಕರಾದ ಲಲಿತಾ, ಶಕುಂತಲಾ, ಮಂಗಳ, ಭಾರಮವ್ವ, ಕೊಟ್ರೇಶ್, ನಿಂಗಪ್ಪ, ಗಂಗಮ್ಮ, ಶಾರದಮ್ಮ, ಪದ್ಮಾವತಿ, ಲೋಕೇಶ್, ಸಿದ್ದೇಶ್, ಜಂಬಣ್ಣ, ಸಿ. ರಶ್ಮಿ, ವೀರಸಂಘಯ್ಯ, ಮಂಜುನಾಥ, ಪವಿತಾ ಎಸ್., ಹನುಮಂತಪ್ಪ, ರೇಣುಕಮ್ಮ, ನಾಗರತ್ನಮ್ಮ, ಸುರೇಶ್, ರಮೇಶ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka